# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 82 | THURSDAY 04-06-2026 | PRGI No : KNKAN/26/A0962 | Pages:4 | Rs.2.00 | M: 9742418836

## ಮುಖ್ಯಮಂತ್ರಿ ಹುದ್ದೆಗೆ ನನ್ನನ್ನು ಕಡೆಗಣಿಸಿರುವ ಪ್ರಶ್ನೆಯೇ ಇಲ್ಲ, ಪಕ್ಷದ ನಿರ್ಧಾರಕ್ಕೆ ಬದ್ಧ: ಜಿ ಪರಮೇಶ್ವರ



ಬೆಂಗಳೂರು: ಮುಖ್ಯಮಂತ್ರಿ ಹುದ್ದೆಗೆ ತಮ್ಮನ್ನು ಕಡೆಗಣಿಸಲಾಗಿದೆ ಎಂಬ ಹೇಳಿಕೆಗಳನ್ನು ತಳ್ಳಿಹಾಕಿದ ಹಿರಿಯ ಕಾಂಗ್ರೆಸ್ ನಾಯಕ ಜಿ ಪರಮೇಶ್ವರ, ತಮಗೆ ಯಾವುದೇ ಅನ್ಯಾಯವಾಗಿಲ್ಲ ಮತ್ತು ಕರ್ನಾಟಕದ ಉಪಮುಖ್ಯಮಂತ್ರಿಯಾಗಿ ನೇಮಕಗೊಂಡಿರುವುದಕ್ಕೆ ತಾವು ಸಂಪೂರ್ಣ ತೃಪ್ತರಾಗಿರುವುದಾಗಿ ಬುಧವಾರ ಹೇಳಿದರು.

ಮುಖ್ಯಮಂತ್ರಿ ಹುದ್ದೆಯ ಆಕಾಂಕ್ಷಿಗಳಲ್ಲಿ ಒಬ್ಬರೆಂದು ಪರಿಗಣಿಸಲ್ಪಟ್ಟಿದ್ದ ಪರಮೇಶ್ವರ್, ಪಕ್ಷದ ನಾಯಕತ್ವವು ತಮಗೆ ಒಂದು ಪ್ರಮುಖ ಜವಾಬ್ದಾರಿಯನ್ನು ನೀಡಿದೆ ಮತ್ತು ಕಾಂಗ್ರೆಸ್ ಹೈಕಮಾಂಡ್‌ನ ನಿರ್ಧಾರವನ್ನು ಒಪ್ಪಿಕೊಂಡಿದ್ದೇನೆ ಎಂದು ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ನನ್ನ ಅನುಭವವನ್ನು ಕಡೆಗಣಿಸಲಾಗಿದೆ ಎನ್ನುವ ಪ್ರಶ್ನೆಯೇ ಉದ್ಭವಿಸುವುದಿಲ್ಲ. ಪಕ್ಷದ ನಿರ್ಧಾರಕ್ಕೆ ಬದ್ಧರಾಗಿರುವುದಾಗಿ ಮತ್ತು ಉಪಮುಖ್ಯಮಂತ್ರಿ ಹುದ್ದೆಯನ್ನು ಜನರಿಗೆ ಸೇವೆ ಸಲ್ಲಿಸುವ ಅವಕಾಶವೆಂದು ಪರಿಗಣಿಸಿರುವುದಾಗಿ ಹೇಳಿದರು.

'ಹೌದು, ನನಗೂ ಮುಖ್ಯಮಂತ್ರಿಯಾಗುವ ಆಸೆ ಇತ್ತು. ಆದರೆ ಹೈಕಮಾಂಡ್ ಯಾವುದೇ ನಿರ್ಧಾರ ತೆಗೆದುಕೊಂಡರೂ, ಪಕ್ಷದ ಶಿಸ್ತಿನ ಸೈನಿಕರಾಗಿ ನಾವು ಅದನ್ನು ಸ್ವೀಕರಿಸಬೇಕು. ಪಕ್ಷದ ನಾಯಕತ್ವಕ್ಕೆ ಧನ್ಯವಾದಗಳು. ತಮ್ಮ ಮೇಲೆ ಇಟ್ಟಿರುವ ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ' ಎಂದರು.

'ಏಕೆಂದರೆ, ಸದ್ಯದ ಪರಿಸ್ಥಿತಿಯಲ್ಲಿ, ನನ್ನನ್ನು ಉಪಮುಖ್ಯಮಂತ್ರಿಯಾಗಿ ಆಯ್ಕೆ ಮಾಡಲಾಗಿದೆ. ನನ್ನ ಮೇಲೆ ಇಟ್ಟಿರುವ ನಂಬಿಕೆ ಮತ್ತು ವಿಶ್ವಾಸಕ್ಕೆ ನಾನು ನನ್ನ ಕೃತಜ್ಞತೆಯನ್ನು ವ್ಯಕ್ತಪಡಿಸಲು ಬಯಸುತ್ತೇನೆ. ಕಾಂಗ್ರೆಸ್ ಸಿದ್ಧಾಂತ ಮತ್ತು ಪ್ರಣಾಳಿಕೆಗೆ ಅನುಗುಣವಾಗಿ ಕೆಲಸ ಮಾಡಲು ಸಿಕ್ಕ ಮತ್ತೊಂದು ಅವಕಾಶವೆಂದು ಪರಿಗಣಿಸಿದ್ದೇನೆ' ಎಂದು ಪರಮೇಶ್ವರ ಹೇಳಿದರು.

ಮುಖ್ಯಮಂತ್ರಿ ಹುದ್ದೆಯ ಸ್ಪರ್ಧೆಯಲ್ಲಿದ್ದ ನಿಮಗೆ ಉಪಮುಖ್ಯಮಂತ್ರಿ ಹುದ್ದೆ ಸಿಕ್ಕಿರುವುದಕ್ಕೆ ತೃಪ್ತರಾಗಿದ್ದೀರಾ ಎಂದು ಕೇಳಿದಾಗ, ಹುದ್ದೆಗಿಂತ ಸಾರ್ವಜನಿಕ ಸೇವೆ ಮುಖ್ಯವಾಗಿದೆ. ಜನರಿಗೆ ಮತ್ತು ರಾಜ್ಯಕ್ಕೆ ಸೇವೆ ಸಲ್ಲಿಸಲು ಅವಕಾಶವನ್ನು ಒದಗಿಸಿದರೆ ಯಾವುದೇ ಹುದ್ದೆ ಒಳ್ಳೆಯದಲ್ಲವೇ? ಅದೊಂದು ಅವಕಾಶ ಎಂದು ಅವರು ಹೇಳಿದರು.

ಮುಖ್ಯಮಂತ್ರಿಯಾಗಿ ಆಯ್ಕೆಯಾದ ಡಿ.ಕೆ. ಶಿವಕುಮಾರ್ ಮತ್ತು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಪರಮೇಶ್ವರ ಅಭಿನಂದಿಸಿದರು. ಇಬ್ಬರೂ ನಾಯಕರು ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯ ಭಾಗವಾಗಿದ್ದರು ಎಂದು ಹೇಳಿದರು.

ಸರ್ಕಾರದಲ್ಲಿ ತಮ್ಮ ಭವಿಷ್ಯದ ಪಾತ್ರದ ಕುರಿತು, ನನಗೆ ಯಾವ ಖಾತೆ ನೀಡಲಾಗುವುದು ಎಂದು ನನಗೆ ತಿಳಿದಿಲ್ಲ. ನನಗೆ ಯಾವುದೇ ಖಾತೆ ವಹಿಸಿದರೂ, ನಾನು ಅದರಲ್ಲಿ ಕೆಲಸ ಮಾಡುತ್ತೇನೆ ಎಂದು ಪರಮೇಶ್ವರ ತಿಳಿಸಿದರು.

## ಮುಖ್ಯಮಂತ್ರಿಯಾಗಿ ಅಜ್ಜಯನ ಹೆಸರಲ್ಲಿ ಡಿಕೆಶಿ ಪ್ರಮಾಣವಚನ ಸ್ವೀಕಾರ



ಬೆಂಗಳೂರು: ರಾಜ್ಯದ 24 ನೇ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿಯಾಗಿ ಇಂದು ಪ್ರಮಾಣವಚನ ಸ್ವೀಕರಿಸಿದರು.

ಇದರೊಂದಿಗೆ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ನೂತನ ಸರ್ಕಾರ ಅಸ್ತಿತ್ವಕ್ಕೆ ಬಂದಿದೆ. ರಾಜಭವನದ ಗಾಜಿನ ಮನೆಯಲ್ಲಿಂದು ನಡೆದ ವರ್ಣರಂಜಿತ ಸಮಾರಂಭದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರಮಾಣವಚನ ಬೋಧಿಸಿದರು.

ಡಿ.ಕೆ.ಶಿವಕುಮಾರ್ ಅವರು ಕೈಯಲ್ಲಿ ಸಂವಿಧಾನದ ಪುಸ್ತಕ ಹಿಡಿದು ಅಜ್ಜಯ್ಯನ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು.

ಇದೇ ವೇಳೆ ಉಪಮುಖ್ಯಮಂತ್ರಿಯಾಗಿ ಡಾ.ಜಿ ಪರಮೇಶ್ವರ್ ಅವರು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಹೆಸರಿನಲ್ಲಿ ಪ್ರಮಾವಚನ ಸ್ವೀಕರಿಸಿದರು.

ಸಂಪುಟ ದರ್ಜೆ ಸಚಿವರಾಗಿ ಕೆ.ಎಚ್. ಮುನಿಯಪ್ಪ, ಕೆ.ಜೆ.ಜಾರ್ಜ್, ಎಂ.ಬಿ. ಪಾಟೀಲ, ರಾಮಲಿಂಗಾರೆಡ್ಡಿ, ಸತೀಶ್ ಜಾರಕಿಹೊಳಿ, ಕೃಷ್ಣಬೈರೇಗೌಡ, ಪ್ರಿಯಾಂಕ್ ಖರ್ಗೆ, ಯು.ಟಿ.ಖಾದರ್, ಈಶ್ವರ್ ಖಂಡ್ರೆ, ಯತೀಂದ್ರ ಸಿದ್ದರಾಮಯ್ಯ, ಬೈರತಿ ಸುರೇಶ್ ಹಾಗೂ ಡಾ.ಶರಣ್ ಪ್ರಕಾಶ್ ಪಾಟೀಲ್ ಪ್ರಮಾಣ ವಚನ ಸ್ವೀಕರಿಸಿದರು.

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ನೂತನ ಸಚಿವರಿಗೆ ಪ್ರಮಾಣವಚನ ಬೋಧಿಸಿದರು.

ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖಂಡರಾದ ಕೆ.ಸಿ.ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲಾ, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಕೇರಳಂ ಮುಖ್ಯಮಂತ್ರಿ ಸತೀಶನ್ ಹಾಗೂ ಹಿಮಾಚಲ ಪ್ರದೇಶ ಮುಖ್ಯಮಂತ್ರಿ ವೀಂದರ್ ಸಿಂಗ್ ಸುಖ್ಖು ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

## ಜಾನಪದ ಸಾಹಿತ್ಯವು ಒಂದು ನಾಡಿನ ಜನರ ಜೀವನಾಡಿ–ಬಿರಾದಾರ



ಮೂಡಲಗಿ: ಪಟ್ಟಣದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಜ್ಞಾನದೀಪ್ತಿ ಫೌಂಡೇಶನ್ಸ್. ಇವುಗಳ ಸಹಯೋಗದಲ್ಲಿ ಐವತ್ತೊಂದನೆಯ ಬೆಳದಿಂಗಳ ಸಾಹಿತ್ಯ ಚಿಂತನ ಮಂಥನ ಕಾರ್ಯಕ್ರಮದಲ್ಲಿ ರಮೇಶ ಬಿರಾದಾರ ಮಾತನಾಡಿದರು.

**ಬೆಳಗಾವಿ ವಾರ್ತೆ ಮೂಡಲಗಿ:** ಜಾನಪದ ಸಾಹಿತ್ಯವು ಒಂದು ನಾಡಿನ ಜನರ ಜೀವನಾಡಿ, ಸಂಸ್ಕೃತಿಯ ಕನ್ನಡಿ. ಲಿಖಿತ ರೂಪದಲ್ಲಿಲ್ಲದಿದ್ದರೂ ಬಾಯಿಂದ ಬಾಯಿಗೆ ತಲೆಮಾರುಗಳಿಂದ ಹರಿದು ಬಂದಿರುವ ಈ ಸಾಹಿತ್ಯವು ನಮ್ಮ ಮಣ್ಣಿನ ಅಪ್ಪಟ ಸೌರಭವನ್ನು ಉಳಿಸಿಕೊಂಡಿದೆ. ಆದರೆ ಇಂದು ಕಾಲ ಉರುಳಿದಂತೆ ಜಾನಪದ ಸಾಹಿತ್ಯದ ಸ್ವರೂಪ, ಪ್ರಾಮುಖ್ಯತೆ ಮತ್ತು ಅಸ್ತಿತ್ವದಲ್ಲಿ ಭಾರಿ ಬದಲಾವಣೆಗಳಾಗಿವೆ ಎಂದು ಉಪನ್ಯಾಸಕ ರಮೇಶ ಬಿರಾದಾರ ಹೇಳಿದರು.

ಅವರುಪಟ್ಟಣದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಜ್ಞಾನದೀಪ್ತಿ ಫೌಂಡೇಶನ್ಸ್. ಮೂಡಲಗಿ ಇವುಗಳ ಸಹಯೋಗದಲ್ಲಿ ಐವತ್ತೊಂದನೆಯ ಬೆಳದಿಂಗಳ ಸಾಹಿತ್ಯ ಚಿಂತನ ಮಂಥನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಪ್ರಾಚಾರ್ಯ ಎಸ್ ಡಿ ತಳವಾರ, ಹಳೆಯ ದಿನಗಳಲ್ಲಿ ಜಾನಪದ ಸಾಹಿತ್ಯ ಎಂಬುದು ಕೇವಲ ಮನರಂಜನೆಯಾಗಿರಲಿಲ್ಲ, ಅದು ಜನರ ದೈನಂದಿನ ಜೀವನದ ಉಸಿರಾಗಿತ್ತು. ಜಾನಪದ ಸಾಹಿತ್ಯವು 'ಅಂದು' ಹಳೆಯ ಜನರ ಅಜ್ಞಾತ ಸೃಷ್ಟಿಯಾಗಿ ಅವರ ಸುಖ ದುಃಖಗಳ ಒಡನಾಡಿಯಾಗಿತ್ತು .'ಇಂದು' ಅದು ನಮ್ಮ ಅಸ್ಮಿತೆಯನ್ನು ನೆನಪಿಸುವ ಐತಿಹಾಸಿಕ ಮತ್ತು ಸಂಸ್ಕೃತಿಕ ಆಸ್ತಿಯಾಗಿದೆ. ನಮ್ಮ ಸಾಂಸ್ಕೃತಿಕ ಬೇರುಗಳನ್ನು ಗಟ್ಟಿಯಾಗಿಟ್ಟುಕೊಳ್ಳಲು ಜಾನಪದ ಸಾಹಿತ್ಯವನ್ನು ಕೇವಲ ವೇದಿಕೆಗಳಿಗೆ ಸೀಮಿತಗೊಳಿಸದೆ ನಮ್ಮ ಮನಸ್ಸುಗಳಿಗೆ ಜೀವಂತವಾಗಿಡುವ ಕೆಲಸಗಳನ್ನು ಮಾಡುತ್ತಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯ ಶ್ಲಾಘನಿ?ಯವಾಗಿದೆ ಎಂದು ಹೇಳಿದರು.

ವೇದಿಕೆಯ ಮೇಲೆ ಕಸಾಪ ಅಧ್ಯಕ್ಷ ಡಾ. ಸಂಜಯ ಶಿಂದಿಹಟ್ಟಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಸಂಗಮೇಶ ಗುಜಗೊಂಡ, ಮಹಾದೇವ ಜಡ್ಡಿಮನಿ, ಬಿ ಎಂ ನಂದಿ, ಎ ಜೆ ಶರಣಾರ್ಥಿ, ಮಾವಿನಹಂಡಿ, ವ್ಯಾಪಾರಿ, ಲಂಕೇಪ್ಪನವರ, ಶಿವರಾಜ ಕಾಂಬಳೆ, ಬಿ ವೈ ಶಿವಾಪುರ, ಅಯ್ಯನಗೌಡರ್ ,ಶೈಲಜಾ ಬಡಿಗೇರ, ಗೋದಾವರಿ ದೇಶಪಾಂಡೆ,ಬಾಲೇಶ ತುಬಾಕಿ ಉಪಸ್ಥಿತರಿದ್ದರು. ಶಿಕ್ಷಕ ಆರ್ ಎಂ ಕಾಂಬಳೆ ಪ್ರಾರ್ಥಿಸಿದರು. ಕಸಾಪ ಗೌರವ ಕಾರ್ಯದರ್ಶಿ ಬಿ.ಆರ್ ತರಕಾರ ಸ್ವಾಗತಿಸಿ, ಪ್ರಾಸ್ತಾವಿಕ ನುಡಿಗಳನ್ನಾಡಿದರು.

## ಸಪ್ತ ಸಾಗರದಾಚೆ ಕನ್ನಡದ ಕಂಪು

### ಕನ್ನಡ ಬರಿ ಭಾಷೆಯಲ್ಲ, ನಮ್ಮ ಸಂಸ್ಕೃತಿ: ಡಾ.ಅರ್ಚನಾ ಅಥಣಿ



**ಬೆಳಗಾವಿ ವಾರ್ತೆ ಮೋಳೆ;** ಕನ್ನಡವನ್ನು ನಾವು ಒಂದು ಭಾಷೆಯನ್ನಾಗಿ ನೋಡದೆ ವಿವಿಧ ಆಯಾಮಗಳಲ್ಲಿ ನೋಡಬೇಕಿದೆ. ಎಲ್ಲ ಸೀಮಿತಗಳನ್ನು ಮೀರಿಯೂ ನಾವು ವಿಶ್ವ ಪ್ರಜ್ಞೆಯನ್ನಾಗಿ ಕನ್ನಡವನ್ನು ಬೆಳೆಸಬೇಕಿದೆ ಎಂದು ಸಾಹಿತಿ ಡಾ, ಅರ್ಚನಾ ಅಥಣಿ ಅಭಿಪ್ರಾಯ ಪಟ್ಟರು.

ಇತ್ತಿಚಿಗೆ ಭೂತಾನ್ ದೇಶದ ರಾಜಧಾನಿ ಥಿಂಪುನ ಪೆಜೊವರ್ ಸಭಾಂಗಣದಲ್ಲಿ ಪ್ರತಿಷ್ಠಿತ ಇಂಟರನ್ಯಾಷನಲ್ ಕಲ್ಚರಲ್ ಫೆಸ್ಟ್ ಕೌನ್ಸಿಲ್ ಇಂಡಿಯಾ ಹಾಗೂ ಫ್ರೆಂಡ್ಸ್ ಶಿಫ್ ಕ್ಲಬ್ ಭೂತಾನ ಇವರ ಸಂಯುಕ್ತ ಆಶ್ರಯದಲ್ಲಿ ಜರುಗಿರುವ ಕಾರ್ಯಕ್ರಮದಲ್ಲಿ ಸಾಹಿತಿ ಡಾ.ಅರ್ಚನಾ ಅಥಣಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡುತ್ತಿದ್ದರು. ಕನ್ನಡ ಭಾಷೆಗೆ ಸಾವಿರಾರು ವರ್ಷಗಳ ಇತಿಹಾಸವಿದೆ.ಮೇರು ದಿಗ್ಗಜರು ಸಾಹಿತ್ಯವನ್ನು ಕಟ್ಟಿ ಬೆಳೆಸಿದ್ದಾರೆ. ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ ಸಮುದ್ರವಿದ್ದಂತೆ.ಇಲ್ಲಿ ಸಾಹಿತ್ಯವೇ ಸಾಮ್ರಾಟ. ಸಾಹಿತ್ಯ ನಮಗೆ ಅರಿವಿಲ್ಲದೆ ಸಂತೋಷ ನೀಡುತ್ತದೆ. ಒಬ್ಬ ಸಾಹಿತಿಗೆ ಸಾವಿರಾರು ಜನರನ್ನು ಬಡಿದೆಬ್ಬಿಸುವ ಶಕ್ತಿಯಿದೆ. ಜೊತೆಗೆ ಜನರನ್ನು ಶಾಂತಗೊಳಿಸುವ ಶಕ್ತಿಯೂ ಇದೆ.ಅಂತಹ ಸಮೃದ್ಧತೆ ಹೊಂದಿದ ನೆಲದಲ್ಲಿ ಜನಿಸಿದ ನಾವೇ ಪುಣ್ಯವಂತರು.

ಕನ್ನಡ ಸಾಹಿತ್ಯಕ್ಕೆ ಸಾವಿರಾರು ವರ್ಷಗಳ ಇತಿಹಾಸ ಹೊಂದಿದೆ. ವಚನ ಸಾಹಿತ್ಯ, ದಾಸ ಸಾಹಿಯ್ಯ, ಇಂದೂ ಅಚ್ಚಳಿಯದೆ ಉಳಿದಿದೆ. ಸಾಹಿತ್ಯ ಜೀವನ ಕಲಿಸಿ ಕೊಟ್ಟಿದೆ. ಅಂಥ ಶಕ್ತಿ ಕನ್ನಡ ಭಾಷೆಗಿದೆ. ನಡೆ,ನುಡಿಯನ್ನು ಕಲಿಸಿ ಕೊಡುವುದೇ ಕನ್ನಡ ಸಾಹಿತ್ಯ. ಇಂದು ಜಗತ್ತಿನಾದ್ಯಂತ ಮಾನವ ಗುಣವನ್ನು ಕಲಿಸಿ ಕೊಡುತ್ತಿದೆ.ಅಂತಹ ಸಾಹಿತ್ಯವನ್ನು ಭಾರತ ದೇಶದಲ್ಲಿ ಅಷ್ಟೇ ಅಲ್ಲ ವಿದೇಶಗಳಲ್ಲಿಯೂ ಕನ್ನಡ ಕಂಪನ್ನು ಬೀಸುತ್ತಿದೆ. ಆ ಶಕ್ತಿ ಕನ್ನಡ ಬಾಷೆಗಿದೆ ಎಂದರು.

ಭೂತಾನ್ ಲೋಕಸಭಾ ಸದಸ್ಯ ಎಚ್.ಇ. ದಶೋ ಉಗೇನ್ ಲಾಮಾ ಮಾತನನಾಡಿ ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಭಾರತ, ಭೂತಾನ್ ದೇಶಗಳ ನಡುವಿನ ಬಾಂಧವ್ಯವನ್ನು ಬೆಸೆಯುವ ಕಾರ್ಯ ಸಹಕಾರಿಯಾಗುತ್ತಿವೆ. ಈ ಕಾರ್ಯಕ್ರಮ ಅತ್ಯಂತ ಖುಷಿ ತಂದಿದೆ., ಇಂಥ ಕಾರ್ಯಕ್ರಮಗಳು ಮೇಲಿಂದ ಮೇಲೆ ನಡೆಸುವಂತೆ ಸಂಘಟಕರಿಗೆ ಹೇಳಿದರು.

ಈ ಕಾರ್ಯಕ್ರಮದಲ್ಲಿ ಭೂತಾನಿನ ಸಂಸತ್ ಸದಸ್ಯ ಎಚ್.ಇ. ದಶೋ ಉಗೇನ್ ಲಾಮಾ ಸೇರಿದಂತೆ ಅನೇಕರು ಪಾಲ್ಗೊಂಡು ಡಾ.ಅರ್ಚನಾ ಅಥಣಿಯವರನ್ನು ಸನ್ಮಾನಿಸಿ ನೆನಪಿನ ಕಾಣಿಕೆ ನೀಡಿ ಗೌರವಿಸಿದರು.

> "ಕನ್ನಡ ಭಾಷೆ ಸಾವಿರಾರು ವರ್ಷಗಳ ಇತಿಹಾಸ ಹೊಂದಿದ್ದು, ಈ ನಾಡಿನಲ್ಲಿ ಹಲವು ರಾಜಮನೆತನಗಳು ಆಳ್ವಿಕೆ ಮಾಡಿ ಭಾಷೆ ಶ್ರೀಮಂತ ಗೊಳಿಸಲು ಶ್ರಮಿಸಿವೆ, ಅಂತೆಯೇ ಈ ಭಾಷೆ ಭಾರತ ದೇಶದಲ್ಲಿ ಅಷ್ಟೇ ಅಲ್ಲಿ ಸಪ್ತ ಸಾಗರದಾಚೆಯೂ ಕನ್ನಡ ಭಾಷೆ ತನ್ನ ಕಂಪನ್ನು ಬೀರುತ್ತಿದೆ."
>
> **ಡಾ.ಅರ್ಚನಾ ಅಥಣಿ**
> **ಸಾಹಿತಿ**

## ಬೆಟಗೇರಿ ಪ್ರೌಢ ಶಾಲೆಯಲ್ಲಿ ಅದ್ದೂರಿಯಾಗಿ ನಡೆದ ಶಾಲಾ ಪ್ರಾರಂಭೋತ್ಸವ



ಬೆಟಗೇರಿ:ಗ್ರಾಮದ ವಿವಿಡಿ ಸರ್ಕಾರಿ ಪ್ರೌಢ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವ ನಡೆಯಿತು.

**ಬೆಳಗಾವಿ ವಾರ್ತೆ ಬೆಟಗೇರಿ:** ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮದ ವಿವಿಡಿ ಸರ್ಕಾರಿ ಪ್ರೌಢ ಶಾಲೆಯಲ್ಲಿ ಸನ್ 2026-27ನೇ ಸಾಲಿನ ಶಾಲಾ ಪ್ರಾರಂಭೋತ್ಸವ ಜೂ.1ರಂದು ಸಡಗರ ಸಂಭ್ರಮದಿಂದ ಅದ್ದೂರಿಯಾಗಿ ನಡೆಯಿತು.

ಶಾಲೆಯ ಪ್ರವೇಶ ದ್ವಾರ ಹಸಿರು ತಳಿರು ತೋರಣಗಳಿಂದ ಕಂಗೊಳಿಸುತ್ತಿತ್ತು. ಶಾಲಾ ಕೊಠಡಿಗಳ ಪ್ರಮುಖ ಬೀದಿಗಳು ರಂಗೊಲಿ ಚಿತ್ತಾರಗಳಿಂದ ಕೂಡಿತ್ತು. ಶಾಲಾ ಮುಖ್ಯೋಪಾಧ್ಯಯ ರಮೇಶ ಅಳಗುಂಡಿ ಮತ್ತು ಶಿಕ್ಷಕರು ಹಾಗೂ ಶಿಕ್ಷಣಪ್ರೇಮಿಗಳು ಶಾಲೆಯ ಮಕ್ಕಳಿಗೆ ಹೂ ಹಾಕಿ ಮತ್ತು ಸಿಹಿ ನೀಡಿ ಬರಮಾಡಿಕೊಂಡ ಬಳಿಕ ಶಾರದಾ ಮಾತೆ, ಸ್ವಾಮಿ ವಿವೇಕಾನಂದ, ಭಾರತ ಮಾತೆ ಭಾವಚಿತ್ರ ಮತ್ತು ಮೂರ್ತಿಗಳಿಗೆ ಪೂಜೆ, ಪುಷ್ಪ ಸಮರ್ಪಣೆ ಜರುಗಿತು.

ಗೋಕಾಕ ತಹಶೀಲ್ದಾರ ಮೋಹನ ಭಸ್ಮೆ ಮುಖ್ಯತಿಥಿಗಳಾಗಿ ಮಾತನಾಡಿ, ಉತ್ತಮ ತರಬೇತಿ ಪಡೆದ ನುರಿತ ಶಿಕ್ಷಕರು ಈ ಶಾಲೆಯಲ್ಲಿದ್ದಾರೆ. ಇಂತಹ ಶಾಲೆಯಲ್ಲಿ ಕಲಿಯುತ್ತಿರುವದು ನಿಮ್ಮ ಪುಣ್ಯ. ಈ ಶಾಲೆಯಲ್ಲಿ ಪರಿಸರ ಚೆನ್ನಾಗಿದೆ. ಮಕ್ಕಳಿಗೆ ಸಾಧನೆ ಮಾಡಬೇಕೆಂಬ ಕನಸು ಇರಬೇಕು. ಸರ್ಕಾರಿ ಶಾಲೆಗಳಲ್ಲಿಯೂ ಸರ್ಕಾರ ವಿವಿಧ ಸಹಾಯ, ಸೌಲಭ್ಯಗಳನ್ನು ಕಲ್ಪಿಸುತ್ತಿದೆ. ಮಕ್ಕಳು ಸರ್ಕಾರಿ ಶಾಲೆಯ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಗೋಕಾಕ ಇಓ ಪರಶುರಾಮ ಗಸ್ತಿ, ಗೋಕಾಕ ಬಿಆರ್‌ಸಿ ಸಮನ್ವಯಾಧಿಕಾರಿ ಎಸ್.ವಿ.ಕುಲಕರ್ಣಿ ಶಾಲಾ ಪ್ರಾರಂಭೋತ್ಸವ ಕುರಿತು ಮಾತನಾಡಿದರು. ಈ ಶಾಲೆಯಲ್ಲಿ ಮಕ್ಕಳ ಪ್ರವೇಶ ದಾಖಲಾತಿ ಬರದಿಂದ ನಡೆದಿದೆ. ಶಾಲಾ ಮಕ್ಕಳಿಗೆ ಪಠ್ಯ ಪುಸ್ತಕ ಮತ್ತು ಸಮವಸ್ತ್ರ ವಿತರಿಸಿದರು.

ವಿಶೇಷ ಊಟದ ವ್ಯವಸ್ಥೆ: ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದ ಪ್ರಯುಕ್ತ ಬೆಟಗೇರಿ ವಿವಿಡಿ ಸರಕಾರಿ ಪ್ರೌಢ ಶಾಲೆಯಲ್ಲಿ ವಿಶೇಷ ಊಟದ ವ್ಯವಸ್ಥೆ ಮಾಡಲಾಗಿತ್ತು. ಅತಿಥಿಗಳು, ಪಾಲಕರು, ಶಾಲಾ ಮಕ್ಕಳು, ಎಸ್‌ಡಿಎಂಸಿ ಅಧ್ಯಕ್ಷ, ಸದಸ್ಯರು, ಶಿಕ್ಷಣಪ್ರೇಮಿಗಳು ಮಾವಿನ ಹಣ್ಣು ಸಿಕರಣೆ ವಿಶೇಷ ಊಟದ ಸವಿ ಸವಿದು ಸಂಭ್ರಮಿಸಿದರು.

ಈ ವೇಳೆ ಶಾಲೆಯ ಮುಖ್ಯೋಪಾಧ್ಯಯ ರಮೇಶ ಅಳಗುಂಡಿ, ಎಸ್‌ಡಿಎಂಸಿ ಅಧ್ಯಕ್ಷ ರಾಮಣ್ಣ ನೀಲಣ್ಣವರ ಹಾಗೂ ಸದಸ್ಯರು ಶ್ರೀಶೈಲ ಗಾಣಗಿ, ಶಿವಾಜಿ ನೀಲಣ್ಣವರ, ಲಕ್ಷ್ಮಣ ನೀಲಣ್ಣವರ, ಹನುಮಂತ ಹಾಲಣ್ಣವರ, ಬಸವರಾಜ ಪಣದಿ, ಕತ್ತಿ, ಸುರೇಶ ಕೌಜಲಗಿ, ಅರುಣ ಸವತಿಕಾಯಿ, ಈರಣ್ಣ ಪಟಗುಂದಿ, ಶುಭಾ.ಬಿ., ಸದಾನಂದ ತೆರಣಿ, ಗಣಪತಿ ಭಾಗೋಜಿ, ರಾಕೇಶ ನಡೋಣಿ, ಭಾಗ್ಯಶ್ರೀ ನಾಯಕ, ಬೆಟಗೇರಿ ಸುತ್ತಲಿನ ಹಳ್ಳಿಗಳ ಶಿಕ್ಷಣ ಪ್ರೇಮಿಗಳು, ಪಾಲಕರು, ಶಾಲೆಯ ವಿದ್ಯಾರ್ಥಿಗಳು ಇತರರು ಇದ್ದರು.

# ಮುದ್ದೇಬಿಹಾಳ: ವಿದ್ಯುತ್ ಸಮಸ್ಯೆಗೆ ಆಗ್ರಹಿಸಿ ಕಚೇರಿಗೆ ರೈತರ ಮುತ್ತಿಗೆ; ಭರವಸೆಯ ನಂತರ ಪ್ರತಿಭಟನೆ ವಾಪಸ್



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲೂಕಿನಲ್ಲಿ ಕಳೆದ ಒಂದು ತಿಂಗಳಿನಿಂದ ವಿದ್ಯುತ್ ಸರಬರಾಜು ಸಂಪೂರ್ಣವಾಗಿ ಅಸ್ತವ್ಯಸ್ತಗೊಂಡಿದ್ದು, ರೈತರನ್ನು ತೀವ್ರ ಸಂಕಷ್ಟಕ್ಕೆ ದೂಡಿದೆ. ನಿರಂತರವಾಗಿ ಉಂಟಾಗುತ್ತಿರುವ ಲೈನ್ ಟ್ರಿಪ್ ಹಾಗೂ ಟ್ರಾನ್ಸ್‌ಫಾರ್ಮರ್ (ಟಿ.ಸಿ) ಸುಟ್ಟುಹೋಗುತ್ತಿರುವ ಸಮಸ್ಯೆಯಿಂದಾಗಿ ತಾಲೂಕಿನ ಪ್ರಮುಖ ವಾಣಿಜ್ಯ ಬೆಳೆಯಾದ ಕಬ್ಬು ಸೇರಿದಂತೆ ವಿವಿಧ ಬೆಳೆಗಳು ಒಣಗಿ ಕರಕಲಾಗುತ್ತಿವೆ. ಹೆಸ್ಕಾಂ ಇಲಾಖೆಯ ಈ ಬೇಜವಾಬ್ದಾರಿತನ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆಯನ್ನು ಖಂಡಿಸಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ನೇತೃತ್ವದಲ್ಲಿ ನೂರಾರು ರೈತರು ಸೋಮವಾರ ಸ್ಥಳೀಯ ಹೆಸ್ಕಾಂ (ಕೆ.ಇ.ಬಿ) ಕಚೇರಿಗೆ ಮುತ್ತಿಗೆ ಹಾಕಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

**ಅಧಿಕಾರಿಗಳ ವಿರುದ್ಧ ರೈತ ನಾಯಕರ ತರಾಟೆ:**

ಪ್ರತಿಭಟನೆಯ ನೇತೃತ್ವವಹಿಸಿ ಮಾತನಾಡಿದ ರೈತ ಸಂಘದ ರಾಜ್ಯ ಉಪಾಧ್ಯಕ್ಷರಾದ ಶಾಂತಗೌಡ ಎಸ್. ಪಾಟೀಲ (ನಡಹಳ್ಳಿ) ಹಾಗೂ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಅವರು ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡರು. "ಸರ್ಕಾರದ ನಿಯಮದಂತೆ ಕೃಷಿ ಪಂಪ್‌ಸೆಟ್‌ಗಳಿಗೆ ದಿನಕ್ಕೆ ಕನಿಷ್ಠ 7 ಗಂಟೆಗಳ ಕಾಲ ತ್ರೀ–ಫೇಸ್ ವಿದ್ಯುತ್ ನೀಡಬೇಕು. ಆದರೆ, ತಾಲೂಕಿನಲ್ಲಿ ಸಮರ್ಪಕ ವಿದ್ಯುತ್ ಸಿಗುತ್ತಿಲ್ಲ. ಅಧಿಕಾರಿಗಳು ಹಾಗೂ ಲೈನ್‌ಮನ್‌ಗಳ ಬೇಜವಾಬ್ದಾರಿತನದಿಂದಾಗಿ ರೈತರೇ ಸ್ವಂತ ಖರ್ಚಿನಲ್ಲಿ ಟಿ.ಸಿಗಳನ್ನು ಹೊತ್ತು ತರುವ ಪರಿಸ್ಥಿತಿ ನಿರ್ಮಾಣವಾಗಿದೆ. ರೈತರಿಗೆ ಗುಣಮಟ್ಟದ ಮತ್ತು ಸುರಕ್ಷಿತ ವಿದ್ಯುತ್ ಪೂರೈಕೆ ಮಾಡುವುದು ಸರ್ಕಾರದ ಕರ್ತವ್ಯ. ಆದರೆ ಇಲಾಖೆ ಸಂಪೂರ್ಣ ವಿಫಲವಾಗಿದೆ" ಎಂದು ದೂರಿದರು.

ಇದೇ ವೇಳೆ, ಹಳ್ಳೂರು ಗ್ರಾಮದ ರೈತ ಮಲ್ಲಪ್ಪ ಎಂಬುವವರ ಹೊಲದಲ್ಲಿ ಟಿಸಿ ಸುಟ್ಟುಹೋಗಿ, ಕಬ್ಬಿನ ಬೆಳೆ ಒಣಗಿ ನಾಶವಾಗಿದ್ದರಿಂದ ಬೇಸತ್ತ ಅವರು, ಅಧಿಕಾರಿಗಳ ಮುಂದೆ ಕಣ್ಣೀರಿಟ್ಟು ತಮ್ಮ ಅಸಹಾಯಕತೆ ವ್ಯಕ್ತಪಡಿಸಿದ ಘಟನೆ ನೆರೆದಿದ್ದವರ ಕಣ್ಣಾಲಿಗಳನ್ನು ಒದ್ದೆ ಮಾಡಿತು.

**ಅಧಿಕಾರಿಗಳ ವರ್ಗಾವಣೆ ಹಾಗೂ ಅಮಾನತಿಗೆ ಆಗ್ರಹ:**

ಢವಳಗಿ ಹೆಸ್ಕಾಂ ಶಾಖಾಧಿಕಾರಿಯಾದ ಭೀಮಣ್ಣ ಯಲಗೋಡ ಅವರು ಕಳೆದ ಹತ್ತು ವರ್ಷಗಳಿಂದ ಮುದ್ದೇಬಿಹಾಳ ತಾಲೂಕಿನಲ್ಲೇ ಬೀಡುಬಿಟ್ಟಿದ್ದಾರೆ. ಇಷ್ಟು ದೀರ್ಘಾವಧಿಯಿಂದ ಇಲ್ಲೇ ಇರುವುದರಿಂದ ಅವರು ರೈತರ ಯಾವುದೇ ಸಮಸ್ಯೆಗಳಿಗೆ ಸರಿಯಾಗಿ ಸ್ಪಂದಿಸುತ್ತಿಲ್ಲ. ಕೂಡಲೇ ಇವರನ್ನು ಬೇರೆಡೆಗೆ ವರ್ಗಾವಣೆ ಮಾಡಬೇಕು ಎಂದು ರೈತರು ಪಟ್ಟು ಹಿಡಿದರು. ಇದರೊಂದಿಗೆ, ವಿದ್ಯುತ್ ಸಮಸ್ಯೆ ಎದುರಾದಾಗ ಸ್ಥಳೀಯ ರೈತರಿಂದ ಹಣ ವಸೂಲಿ ಮಾಡುವ ಲೈನ್‌ಮನ್‌ಗಳನ್ನು ತಕ್ಷಣವೇ ಅಮಾನತು (ಸಸ್ಪೆಂಡ್) ಮಾಡಬೇಕು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

**ರೈತರ ಪ್ರಮುಖ ಬೇಡಿಕೆಗಳು:**

ಕೃಷಿ ಪಂಪ್‌ಸೆಟ್‌ಗಳಿಗೆ ನಿಯಮಾನುಸಾರ ದಿನಕ್ಕೆ ಕನಿಷ್ಠ 7 ಗಂಟೆಗಳ ಕಾಲ ನಿರಂತರ 'ತ್ರೀ–ಫೇಸ್' ಮತ್ತು ಅಗತ್ಯವಿರುವೆಡೆ ಸಿಂಗಲ್ ಫೇಸ್ ವಿದ್ಯುತ್ ನೀಡಬೇಕು.

ಸುಟ್ಟುಹೋದ ಟಿ.ಸಿಗಳನ್ನು ಯಾವುದೇ ವಿಳಂಬವಿಲ್ಲದೆ ಇಲಾಖೆಯ ಸ್ವಂತ ವೆಚ್ಚದಲ್ಲೇ 72 ಗಂಟೆಗಳ ಒಳಗೆ ಬದಲಾಯಿಸಿಕೊಡಬೇಕು.

ಗ್ರಾಮೀಣ ಭಾಗಗಳಲ್ಲಿ ಜೋತುಬಿದ್ದಿರುವ ವಿದ್ಯುತ್ ತಂತಿಗಳು ಹಾಗೂ ವಾಲಿ ಬಿದ್ದಿರುವ ಕಂಬಗಳನ್ನು ತಕ್ಷಣವೇ ದುರಸ್ತಿಗೊಳಿಸಿ ಸುರಕ್ಷತೆ ಕಾಪಾಡಬೇಕು.

**EE ಅವರಿಂದ ಲಿಖಿತ ಭರವಸೆ – ಪ್ರತಿಭಟನೆ ವಾಪಸ್:**

ರೈತರ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆ ಬಸವನಬಾಗೇವಾಡಿ ವಿಭಾಗದ ಕಾರ್ಯನಿರ್ವಾಹಕ ಅಭಿಯಂತಕರಾದ (ಇಇ) ಎಸ್.ಎಂ. ಬಿರಾದಾರ ಅವರು ಸ್ಥಳಕ್ಕೆ ಆಗಮಿಸಿದರು. ರೈತರ ಅಹವಾಲುಗಳನ್ನು ಆಲಿಸಿದ ಅವರು ಲಿಖಿತ ಭರವಸೆ ಪತ್ರವನ್ನು ನೀಡಿದರು. "ಪ್ರಸ್ತುತ ಸಿಸ್ಟಂನಲ್ಲಿ ವರ್ಕ್ ಲೋಡ್ ಹೆಚ್ಚಿದ್ದರೂ ಸಹ ರೈತರ ಹಿತದೃಷ್ಟಿಯಿಂದ ಹಗಲು 4 ಗಂಟೆ ಹಾಗೂ ರಾತ್ರಿ 3 ಗಂಟೆ ಸೇರಿದಂತೆ ಒಟ್ಟು 7 ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್ ಪೂರೈಸಲಾಗುವುದು. ಮುಂಬರುವ ಮಾನ್ಸೂನ್ ಮಳೆಗೆ ಮುನ್ನವೇ ಜೋತು ಬಿದ್ದ ತಂತಿ ಹಾಗೂ ವಾಲಿ ಬಿದ್ದ ಕಂಬಗಳನ್ನು ಕಡ್ಡಾಯವಾಗಿ ದುರಸ್ತಿ ಮಾಡಲಾಗುವುದು. ಈಗಾಗಲೇ ಟೆಂಡರ್ ಪ್ರಕ್ರಿಯೆಗಳು ಮುಕ್ತಾಯಗೊಂಡಿದ್ದು, ಇನ್ನು ಮುಂದೆ ಟಿ.ಸಿ ಸುಟ್ಟರೆ 72 ಗಂಟೆಗಳ ಒಳಗಾಗಿ ರೈತರಿಗೆ 25 ಹಾಗೂ 50 ಕೆವಿ ಸಾಮರ್ಥ್ಯದ ಹೊಸ ಟಿ.ಸಿ ಒದಗಿಸಲಾಗುವುದು" ಎಂದು ಭರವಸೆ ನೀಡಿದರು. ಅಧಿಕಾರಿಗಳ ಸಕಾರಾತ್ಮಕ ಸ್ಪಂದನೆಯ ನಂತರ ರೈತರು ಪ್ರತಿಭಟನೆಯನ್ನು ಹಿಂತೆಗೆದುಕೊಂಡರು.

ಈ ಸಂದರ್ಭದಲ್ಲಿ ಮುದ್ದೇಬಿಹಾಳ ಕೆಇಬಿ ಇಇ ಹೆಸ್ಕಾಂ ಅಭಿಯಂತಕರು ಆರ್ ಎನ್ ಹಾದಿಮನಿ, ನಾಲತವಾಡ ಹೆಸ್ಕಾಂ ಶಾಖಾಧಿಕಾರಿ ಪ್ರಭು ಗುರಡ್ಡಿ, ಪಿಎಸ್‌ಐ ಸಂಜಯ ತಿಪ್ಪಾರಡ್ಡಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಉಪಾಧ್ಯಕ್ಷ ಕಲ್ಲು ಸೊನ್ನದ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮನಗೌಡ ಪಾಟೀಲ, ಬಸವನಬಾಗೇವಾಡಿ ತಾಲ್ಲೂಕು ಅಧ್ಯಕ್ಷ ಸಿದ್ರಾಮಪ್ಪ ಹೊರ್ತಿ, ನಿಡಗುಂದಿ ತಾಲೂಕು ಅಧ್ಯಕ್ಷ ಸೀತಪ್ಪ ಗಣಿ, ಉಪಾಧ್ಯಕ್ಷ ಸಾಬಣ್ಣ ಅಂಗಡಿ, ಹುಣಸಗಿ ತಾಲೂಕು ಅಧ್ಯಕ್ಷ ಮಲ್ಲನಗೌಡ ನಗನೂರು ಸೇರಿದಂತೆ ಸಂಘಟನೆಯ ಪ್ರಮುಖ ಪದಾಧಿಕಾರಿಗಳು ಹಾಗೂ ತಾಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ನೂರಾರು ರೈತರು ಪಾಲ್ಗೊಂಡಿದ್ದರು.

# ತತ್ವಾಧಾರಿತ, ದೇಶಭಕ್ತಿಯ ಚಿಂತನೆಯುಳ್ಳ ಏಕೈಕ ರಾಜಕೀಯ ಪಕ್ಷ ಬಿಜೆಪಿ: ಜಗದೀಶ ಶೆಟ್ಟರ್



**ಬೆಳಗಾವಿ ವಾರ್ತೆ ವಿಜಯಪುರ:** ಬಿಜೆಪಿ ತತ್ವಾಧಾರಿತ, ದೇಶಭಕ್ತಿಯ ಚಿಂತನೆಯುಳ್ಳ ಏಕೈಕ ರಾಜಕೀಯ ಪಕ್ಷ ಬಿಜೆಪಿ ಎಂದು ಮಾಜಿ ಮುಖ್ಯಮಂತ್ರಿ, ಹಾಲಿ ಬೆಳಗಾವಿ ಸಂಸದ ಜಗದೀಶ ಶೆಟ್ಟರ್ ಹೇಳಿದರು.

ಕೊಲ್ಹಾಪೂರ ಕನೇರಿಮಠದ ಶ್ರೀ ಅದೃಶ್ಯ ಕಾಡಸಿದ್ದೇಶ್ವರ ಮಠದ ಸನ್ನಿಧಿಯಲ್ಲಿ ನಡೆದ ವಿಜಯಪುರ ಜಿಲ್ಲಾ ಬಿಜೆಪಿ ಪ್ರಶಿಕ್ಷಣ ಶಿಬಿರವನ್ನು ವಿದ್ಯುಕ್ತವಾಗಿ ಚಾಲನೆ ನೀಡಿ ಮಾತನಾಡಿದ ಅವರು, ಬಿಜೆಪಿ ಎಂಬುದು ತತ್ವಾಧಾರಿತ ಸಿದ್ಧಾಂತವುಳ್ಳ ಪಕ್ಷ, ಆದರೆ ಕಾಂಗ್ರೆಸ್ ಪಕ್ಷ ಕೇವಲ ಕುಟುಂಬ ಹಾಗೂ ವೋಟ್ ಬ್ಯಾಂಕ್ ಆಧಾರಿತ ರಾಜಕಾರಣವನ್ನು ಮೈಗೂಢಿಸಿಕೊಂಡಿದೆ. ಕೋಟ್ಯಂತರ ಕಾರ್ಯಕರ್ತರನ್ನು ಹೊಂದಿ ಸಿದ್ಧಾಂತದೊಂದಿಗೆ ಬದ್ಧವಾಗಿ ನಡೆಯುವ ಏಕೈಕ ರಾಜಕೀಯ ಪಕ್ಷ ಬಿಜೆಪಿ ಎಂದರು. ಮುಂಬರುವ ಚುನಾವಣೆಗೆ ಬಿಜೆಪಿ ಕಾರ್ಯಕರ್ತರು ಸಿದ್ಧರಾಗಬೇಕು, ರಾಜ್ಯದಲ್ಲಿ ಆಡಳಿತ ವಿರೋಧಿ ಅಲೆ ಜೋರಾಗಿದೆ, ಅಧಿಕಾರ ಕಚ್ಚಾಟದಲ್ಲಿಯೇ ಕಾಂಗ್ರೆಸ್ ತೊಡಗಿದೆ, ಹೀಗಾಗಿ ಬಿಜೆಪಿ ಬಗ್ಗೆ ಜನತೆಯಲ್ಲಿ ಒಲವಿದೆ, ಹೀಗಾಗಿ ಒಗ್ಗಟ್ಟು ಮಂತ್ರ ಜಪಿಸುವ ಮೂಲಕ ಬಿಜೆಪಿ ಕಾರ್ಯಕರ್ತರು ಪಕ್ಷವನ್ನು ಅಧಿಕಾರಕ್ಕೆ ತರಬೇಕು ಎಂದರು.

ಬಿಜೆಪಿ ಕಾರ್ಯಕರ್ತರಲ್ಲಿ ಸಂಘಟನಾತ್ಮಕ ಶಕ್ತಿ, ಪ್ರಚಾರ ಕಾರ್ಯವೈಖರಿ ವೃದ್ಧಿಗಾಗಿ ಈ ಪ್ರಶಿಕ್ಷಣಗಳು ಸಹಕಾರಿ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಮಾತನಾಡಿ, ಕನೇರಿ ಕಾಡಸಿದ್ದೇಶ್ವರ ಮಠ ಅಧ್ಯಾತ್ಮಿಕತೆಯ ದಿವ್ಯತೆಯ ಪಾವನ ನೆಲ, ಈ ನೆಲದಲ್ಲಿ ಅದ್ಭುತ ಶಕ್ತಿ ಇದೆ, ಕಾರ್ಯಕರ್ತರು ಈ ಅದ್ಭುತ ಅಧ್ಯಾತ್ಮಿಕತೆಯ ದಿವ್ಯಾನುಭವದಲ್ಲಿ ಪಕ್ಷ ಸಂಘಟನೆಯ ವಿಷಯಗಳನ್ನು ತಿಳಿದುಕೊಳ್ಳಲಿ ಎಂಬ ಆಶಯದಿಂದ ಈ ಬಾರಿ ಈ ಪ್ರಶಿಕ್ಷಣ ಶಿಬಿರವನ್ನು ಮಠದಲ್ಲಿ ಆಯೋಜಿಸಲಾಗಿದೆ ಎಂದರು.

ಮಾಜಿ ಶಾಸಕ ಹಾಗೂ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್, ವಿಭಾಗ ಸಹ ಪ್ರಭಾರಿ ಬಸವರಾಜ ಯಂಕಂಚಿ, ಮಾಜಿ ಸಚಿವ, ಎಸ್.ಕೆ. ಬೆಳ್ಳುಬ್ಬಿ, ರಮೇಶ ಭೂಸನೂರ, ಸಾವಯವ ಬೀಜ ಪ್ರಮಾಣನ ಸಂಸ್ಥೆ ಮಾಜಿ ಅಧ್ಯಕ್ಷ ವಿಜುಗೌಡ ಪಾಟೀಲ, ಮೇಯರ್ ಎಂ.ಎಸ್. ಕರಡಿ, ಕಾಸುಗೌಡ ಬಿರಾದಾರ, ಸಂಜೀವ ಐಹೊಳಿ, ಚಿದಾನಂದ ಚಲವಾದಿ, ಅನೀಲ ಜಮಾದಾರ, ಮಳುಗೌಡ ಪಾಟಲ, ವೆಂಕಟೇಶ ರಂಗಣ್ಣವರ, ಸಾಬು ಮಾಶ್ಯಾಳ, ಈರಣ್ಣ ರಾವೂರ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಶಿಬಿರಾರ್ಥಿಗಳು ಪಾಲಿಗೆ ಸದಸ್ಯರು ಬಿಜೆಪಿ ಮುಖಂಡರು ಪಾಲ್ಗೊಂಡಿದ್ದರು.



**ಬೆಳಗಾವಿ ವಾರ್ತೆ ಗದಗ:** ಮುಂಗಾರು ಮಳೆ ಉತ್ತಮವಾದುದ್ದರಿಂದ ಬಿತ್ತನೆಯ ಕರ್ಯ ಜೋರಾಗಿದ್ದು ಈ ಹಿನ್ನೆಲೆಯಲ್ಲಿ ಜಿಪಂ ಬೆಳಗಾವಿ ಕೃಷಿ ಇಲಾಖೆ ಚ. ಕಿತ್ತೂರು ರಾಷ್ಟ್ರೀಯ ಹೆದ್ದಾರಿ 4ರ ಪಕ್ಕದ ಜಾನುವಾರು ಪೇಟೆ ಪಕ್ಕದಲ್ಲಿಯ ರೈತ ಸಂರ್ಕ ಕೇಂದ್ರದಲ್ಲಿ ಕೃಷಿ ಅಧಿಕಾರಿಗಳು ರೈತರಿಗೆ ಗೊಬ್ಬರ, ಕೀಟ ನಾಶಕ, ಮೆಕ್ಕೆ ಜೋಳ, ಸೋಯಾಬಿನ್ ಬೀಜಗಳನ್ನು ವಿತರಿಸಿದರು. ರೈತರೆಲ್ಲರೂ ಆಧಾರ ಕರ್ಡದೊಂದಿಗೆ ಸರತಿ ಸಾಲಿನಲ್ಲಿ ನಿಂತು ಬೀಜ ಪಡೆದುಕೊಂಡರು. ಈ ವೇಳೆ ಕೃಷಿ ಅಧಿಕಾರಿ, ಕೃಷಿ ಇಲಾಖೆ ಸಿಬ್ಬಂದಿ, ರೈತರಿದ್ದರು.

# ಹುಲ್ಲೂರು ಎಸ್.ಎನ್.ಡಿ ಶಾಲೆಯಲ್ಲಿ ಸರಳ ಶಾಲಾ ಪ್ರಾರಂಭೋತ್ಸವ: ಮಕ್ಕಳಿಗೆ ಹೂವು ನೀಡಿ ಚಾಲನೆ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಸೋಮವಾರದಿಂದ ಶಾಲೆಗಳು ಪುನರಾರಂಭಗೊಂಡಿದ್ದು, ತಾಲ್ಲೂಕಿನ ಹುಲ್ಲೂರು ಗ್ರಾಮದ ಎಸ್.ಎನ್.ಡಿ ಪಬ್ಲಿಕ್ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವವನ್ನು ಅತ್ಯಂತ ಸರಳ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಶಾಲೆಯ ಸಂಸ್ಥೆಯ ಅಧ್ಯಕ್ಷ ಎಂ.ಎಸ್.ಕೊಪ್ಪ ಅವರ ನೇತೃತ್ವದಲ್ಲಿ ಶಿಕ್ಷಕ ವೃಂದದವರು ಜಂಟಿಯಾಗಿ ಸರಸ್ವತಿ ದೇವಿಯ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಶೈಕ್ಷಣಿಕ ವರ್ಷಕ್ಕೆ ಚಾಲನೆ ನೀಡಿದರು.

ಇದೇ ವೇಳೆ ಶಾಲೆಗೆ ಅನಿರೀಕ್ಷಿತವಾಗಿ ಭೇಟಿ ನೀಡಿದ ತಾಲ್ಲೂಕಿನ ತಹಶೀಲ್ದಾರ್ ಕೀರ್ತಿ ಚಾಲಕ್ ಅವರು, ಸರಸ್ವತಿ ದೇವಿಗೆ ನಮಸ್ಕರಿಸಿದರು. ನಂತರ ಶಾಲೆಗೆ ಆಗಮಿಸಿದ ಪುಟ್ಟಮಕ್ಕಳಿಗೆ ಆತ್ಮೀಯವಾಗಿ ಹೂವುಗಳನ್ನು ನೀಡುವ ಮೂಲಕ ಶಾಲಾ ಆರಂಭೋತ್ಸವಕ್ಕೆ ಚಾಲನೆ ನೀಡಿ, ಮಕ್ಕಳಿಗೆ ಹಾಗೂ ಶಿಕ್ಷಕರಿಗೆ ಶುಭ ಹಾರೈಸಿದರು.

ಬಳಿಕ ಮಾತನಾಡಿದ ತಹಶೀಲ್ದಾರ್ ಕೀರ್ತಿ ಚಾಲಕ್ ಅವರು, "ಗ್ರಾಮೀಣ ಭಾಗದ ಮಕ್ಕಳಿಗೆ ಉತ್ತಮ ಹಾಗೂ ಗುಣಮಟ್ಟದ ಶಿಕ್ಷಣ ಕೊಡುವುದು ಅತ್ಯಂತ ಅಗತ್ಯವಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಮುನ್ನೆಲೆಗೆ ತರುವ ನಿಟ್ಟಿನಲ್ಲಿ ಶಿಕ್ಷಕರು ಮತ್ತು ಪಾಲಕರು ಒಟ್ಟಾಗಿ ಹೆಚ್ಚಿನ ಕಾಳಜಿ ವಹಿಸಿ ಶ್ರಮಿಸಬೇಕು" ಎಂದು ಪ್ರಮುಖ ಸಲಹೆ ನೀಡಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಎಂ.ಎಸ್.ಕೊಪ್ಪ, ಶಾಲೆಯ ಮುಖ್ಯಗುರುಮಾತೆ ರೇಖಾ ಎಂ.ಎಸ್. ಹಾಗೂ ಶಾಲೆಯ ಶಿಕ್ಷಕಿಯರು ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಂಭ್ರಮದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಗದಗ:** ಹೊಸ ಶೈಕ್ಷಣಿಕ ವರ್ಷದ ಆರಂಭವನ್ನು ಸ್ಮರಣೀಯವಾಗಿಸುವ ಉದ್ದೇಶದಿಂದ ಗದಗ ಜಿಲ್ಲೆಯ ಗದಗ ತಾಲೂಕಿನ ಅಸುಂಡಿಯ ಕುವೆಂಪು ಶತಮಾನೋತ್ಸವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾರಂಭೋತ್ಸವ ಕಾರ್ಯಕ್ರಮ ಅತ್ಯಂತ ಅದ್ದೂರಿಯಾಗಿ ಹಾಗೂ ಸಂಭ್ರಮದಿಂದ ಜರುಗಿತು. ಶಾಲೆಯ ಮೊದಲ ದಿನವೇ ಮಕ್ಕಳಲ್ಲಿ ಕಲಿಕೆಯ ಬಗ್ಗೆ ಆಸಕ್ತಿ ಮತ್ತು ಉತ್ಸಾಹ ಮೂಡಿಸುವ ಉದ್ದೇಶದಿಂದ ವಿವಿಧ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.



ಕಾರ್ಯಕ್ರಮಕ್ಕೂ ಮುನ್ನ ಗ್ರಾಮದ ಪ್ರಮುಖ ಬೀದಿಗಳಲ್ಲಿ ವಿದ್ಯಾರ್ಥಿಗಳ ಭವ್ಯ ಮೆರವಣಿಗೆ ನಡೆಸಲಾಯಿತು. ಎತ್ತಿನಗಾಡಿ ಹಾಗೂ ಟ್ರಾಯಕ್ಟರ್‌ಗಳಲ್ಲಿ ಮಕ್ಕಳನ್ನು ಕೂರಿಸಿಕೊಂಡು ಗ್ರಾಮದಲ್ಲಿ ಮೆರವಣಿಗೆ ನಡೆಸಿ ಶಾಲೆಗೆ ಕರೆತರಲಾಯಿತು. ಮೆರವಣಿಗೆಯುದ್ದಕ್ಕೂ ಗ್ರಾಮಸ್ಥರು ಮಕ್ಕಳನ್ನು ಹರ್ಷೋದ್ಗಾರಗಳೊಂದಿಗೆ ಸ್ವಾಗತಿಸಿದರು.

ಶಾಲೆಯ ಮುಖ್ಯ ದ್ವಾರದಲ್ಲಿ ಅತಿಥಿಗಳು ಹಾಗೂ ಶಿಕ್ಷಕರು ಸೇರಿ ಮಕ್ಕಳ ಮೇಲೆ ಪುಷ್ಪವೃಷ್ಟಿ ಮಾಡುವ ಮೂಲಕ ಶಾಲೆಗೆ ಆತ್ಮೀಯವಾಗಿ ಬರಮಾಡಿಕೊಂಡರು. ಮಕ್ಕಳಿಗಾಗಿ ವಿಶೇಷವಾಗಿ ನಿರ್ಮಿಸಲಾಗಿದ್ದ ಸೆಲ್ಫಿ ಕಾರ್ನರ್ ವಿದ್ಯಾರ್ಥಿಗಳು ಮತ್ತು ಪಾಲಕರ ಗಮನ ಸೆಳೆಯಿತು.

ಶಾಲಾರಂಭೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಶಿಕ್ಷಣವು ಪ್ರತಿಯೊಬ್ಬ ಮಗುವಿನ ಮೂಲಭೂತ ಹಕ್ಕಾಗಿದ್ದು, ಸರ್ಕಾರ ಮತ್ತು ಸಂವಿಧಾನದ ಆಶಯವೂ ಎಲ್ಲ ಮಕ್ಕಳಿಗೆ ಗುಣಮಟ್ಟದ ಹಾಗೂ ಸಮಾನ ಶಿಕ್ಷಣ ಒದಗಿಸುವುದಾಗಿದೆ ಎಂದು ಹೇಳಿದರು.

ಮಕ್ಕಳಿಗೆ ಸುರಕ್ಷಿತ, ಸಂತೋಷದಾಯಕ ಮತ್ತು ಪ್ರೇರಣಾದಾಯಕ ವಾತಾವರಣದಲ್ಲಿ ಶಿಕ್ಷಣ ದೊರೆಯಬೇಕು. ಶಾಲೆಯ ಮೊದಲ ದಿನವೇ ಮಕ್ಕಳಲ್ಲಿ ಶಾಲೆಯ ಬಗ್ಗೆ ಪ್ರೀತಿ ಮತ್ತು ಅಭಿಮಾನ ಮೂಡಬೇಕು. ಅದಕ್ಕಾಗಿ ಪಾಲಕರು, ಶಿಕ್ಷಕರು ಹಾಗೂ ಶಾಲಾಭಿವೃದ್ಧಿ ಸಮಿತಿ ಸದಸ್ಯರು ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಶಾಲಾರಂಭದ ದಿನ ಮೂಡುವ ಸಂತಸ ಮಕ್ಕಳಲ್ಲಿ ವರ್ಷಪೂರ್ತಿ ಕಲಿಕೆಯ ಉತ್ಸಾಹವನ್ನು ಉಳಿಸಬಲ್ಲದು? ಎಂದು ಹೇಳಿದರು.

ಪ್ರತಿ ಶೈಕ್ಷಣಿಕ ವರ್ಷದ ಚಟುವಟಿಕೆಗಳನ್ನು ಪೂರ್ವಯೋಜಿತವಾಗಿ ರೂಪಿಸಿ ಅನುಷ್ಠಾನಗೊಳಿಸುವುದೇ ಶಾಲಾರಂಭೋತ್ಸವದ ಪ್ರಮುಖ ಉದ್ದೇಶವಾಗಿದೆ. ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೊಳಿಸಿದ್ದು, ಸರ್ಕಾರಿ ಶಾಲೆಗಳು ಇಂದು ಯಾವುದೇ ಖಾಸಗಿ ಶಾಲೆಗಳಿಗಿಂತ ಕಡಿಮೆ ಇಲ್ಲ ಎಂಬುದನ್ನು ಸಮಾಜ ಅರಿಯಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗದಗ ಗ್ರಾಮೀಣ ಕ್ಷೇತ್ರ ಸಮನ್ವಯಾಧಿಕಾರಿ ಜೆ.ಎ ಭಾವಿಕಟ್ಟಿ, ಡಿ.ವೈ.ಪಿ.ಸಿ ರವಿ ಪ್ರಕಾಶ, ಪ್ರೌಢ ಶಾಲಾ ಶಿಕ್ಷಣ ಸಂಘದ ಅಧ್ಯಕ್ಷ ಬಿ.ಎಫ್. ಪೂಜಾರ, ಕ.ಪ್ರೌ.ಶಿ. ಸಂಘದ ಅಧ್ಯಕ್ಷ ವಿ.ಎಮ್. ಹಿರೇಮಠ, ತಾಲೂಕು ಪ್ರೌಢ ಶಾಲಾ ಶಿಕ್ಷಣ ಸಂಘದ ಅಧ್ಯಕ್ಷ ರವಿರಾಜ ಪವಾರ, ವಿಷಯ ಪರಿವಿಕ್ಷಕರು ಶ್ರೀಮತಿ ಗೀತಾ ಕುಲಕರ್ಣಿ, ಅಸುಂಡಿ ಕಆಔ ಎಮ್.ಡಿ ಹೊಸಮನಿ, ಪ.ಜಾ / ಪ.ಪಂ ಶಿಕ್ಷಕರ ಸಂಘದ ಅಧ್ಯಕ್ಷ ವಿ.ಎಫ್. ಕಲಕುಂಬಿ, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಶಂಕರ ಹಡಗಲಿ, ಹರ್ತಿ ಸಿ.ಆರ್.ಪಿ ಶ್ರೀಮತಿ ಶೈಲಜಾ ಮಟ್ಟಿ, ಜಿಲ್ಲಾ ನೌಕರರ ಸಂಘದ ಅಧ್ಯಕ್ಷ ಡಾ.ಬಸವರಾಜ .ವ್ಹಿ.ಬಳ್ಳಾರಿ, ಅಸುಂಡಿ ಗ್ರಾಮ ಪಂಚಾಯಿತಿ ಆಡಳಿತಧಿಕಾರಿ ಎಚ್.ವೈ. ಹೊನ್ನಿ ನಾಯ್ಕರ, ಶಿಕ್ಷಣ ಪ್ರೇಮಿ ಸೋಮರೆಡ್ಡಿ ರಾಮೇನಳ್ಳಿ, ಎಸ್.ಡಿ.ಎಂ.ಸಿ ಅಧ್ಯಕ್ಷ ಶಿವಾನಂದ ಕರಿಗಾರ, ಮಾಜಿ ಎಸ್.ಡಿ.ಎಂ.ಸಿ ಅಧ್ಯಕ್ಷ ಫಕಿರೆಡ್ಡಿ ಮಾಡಳ್ಳಿ, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ತಾಜುದ್ದೀನ ಓಲೇಕಾರ, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷೆ ಶ್ರೀಮತಿ ರೇಖಾ ತಿಮ್ಮನಗೌಡ್ರ, ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರು, ಗ್ರಾಮ ಪಂಚಾಯಿತಿ ಪ್ರತಿನಿಧಿಗಳು, ಗ್ರಾಮಸ್ಥರು, ಪಾಲಕರು, ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಅಧಿಕಮಾಸದ ಪೂಜೆ

**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ತಾಲೂಕಿನ ಶಿಗ್ಲಿ ಗ್ರಾಮಕ್ಕೆ ಕೊಟ್ಟೂರಿನ ಹಿರೇಮಠದ ಶ್ರೀ ಶಿವಪ್ರಕಾಶ ಮಹಾಸ್ವಾಮಿಗಳು ಆಗಮಿಸಿದ್ದರು.

ಈ ಸಂದರ್ಭದಲ್ಲಿ ಅವರು ಧರ್ಮ ಚಿಂತಕ ಸಾಮಾಜಿಕ ಕಾರ್ಯಕರ್ತ ಈರಣ್ಣ ಪವಾಡದವರ ನಿವಾಸದಲ್ಲಿ ಅಧಿಕಮಾಸದ ಅಂಗವಾಗಿ ಆಗಮಿಸಿ ಪೂಜೆ ಪುನಸ್ಕಾರಗಳನ್ನು ಕೈಗೊಂಡರು.

ಅವರು ಆಶೀರ್ವಚನ ನೀಡಿ ಬೆಳ್ಳಿ ಬಂಗಾರ ಚಿನ್ನ ವಜ್ರ ವೈಡೂರ್ಯಗಳೆಲ್ಲವೂ ಹೊರಗಿನ ಅಲಂಕಾರಗಳು ಆದರೆ ದಾನ ದಯೆ ಧರ್ಮ ಕರುಣೆ ವಾತ್ಸಲ್ಯ ಮೊದಲಾದ ಅಂತರಂಗದ ಗುಣಗಳು ಮನುಷ್ಯನ ಬದುಕಿಗೆ ನೆಮ್ಮದಿ ನೀಡುತ್ತವೆ.

ಪ್ರತಿಯೊಬ್ಬರೂ ಮಾನವತೆಯಿಂದ ದೈವತ್ವದ ಕಡೆಗೆ ಹೋಗಬೇಕು ಈ ನಿಟ್ಟಿನಲ್ಲಿ ಆದಿ ಅನಾದಿ ಕಾಲದಿಂದಲೂ ಆಚರಿಸಿಕೊಂಡು ಬಂದಿರುವ ಧರ್ಮ ಸಂಸ್ಕೃತಿ ಸಂಸ್ಕಾರ ಇವುಗಳನ್ನು ರೂಡಿಸಿಕೊಂಡು ಉತ್ತಮ ಜೀವನವನ್ನು ರೂಪಿಸಿಕೊಳ್ಳಬೇಕು



ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಗದೀಶ ಹಿರೇಮಠ ರಾಮು ಗೋಕರ್ ಈರಣ್ಣ ಪವಾಡದ ನಿರ್ಮಲಾದೇವಿ ಲಾವಣ್ಯ ಲಕ್ಷಿ ಸೇರಿದಂತೆ ಅನೇಕರಿದ್ದರು.

## ಸ್ವಾವಲಂಬಿ ಸಾರಥಿ ಯೋಜನೆ: ನಿರುದ್ಯೋಗಿ ಯುವಕರಿಗೆ ಸ್ವಯಂ ಉದ್ಯೋಗದ ಹೊಸ ದಾರಿ: ಗುರುರಾಜ ಕುಲಕರ್ಣಿ



**ಬೆಳಗಾವಿ ವಾರ್ತೆ ಗದಗ :** ಸರ್ಕಾರದ ಸ್ವಾವಲಂಬಿ ಸಾರಥಿ ಯೋಜನೆಯು, ಹಿಂದುಳಿದ ವರ್ಗಗಳ ಜನರಿಗೆ ಮಹತ್ವಾಕಾಂಕ್ಷಿ ಯೋಜನೆ ಅಗಿದೆ, ನಿರುದ್ಯೋಗಿ ಯುವಕರಿಗೆ ಸ್ವಯಂ ಉದ್ಯೋಗದ ಹಕ್ಕನ್ನು ಕೊಡುತ್ತದೆ, ಜೊತೆಗೆ ಶೇ 50% ಹಣ ಓದಗಿಸುವ ಮೂಲಕ ಸಹಾಯ ಒದಗಿಸುತ್ತದೆ ಅಂತಾ ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಗುರುರಾಜ ಕುಲಕರ್ಣಿ ಹೇಳಿದರು

ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಗದಗ ಜಿಲ್ಲಾ ಕಚೇರಿ ಸಭಾಂಗಣದಲ್ಲಿ ಸ್ವಾವಲಂಬಿ ಸಾರಥಿ ಯೋಜನೆ ಅಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಮಾರ್ಗದರ್ಶನ ಕಾರ್ಯಕ್ರಮ ನಡೆಯಿತು. ರಾಜ್ಯ ಸರ್ಕಾರವು ನಿರುದ್ಯೋಗಿ ಯುವಕರು ಆರ್ಥಿಕವಾಗಿ ಸ್ವಾವಲಂಬಿಗಳಾಗಲು ಮತ್ತು ಸ್ವಯಂ ಉದ್ಯೋಗದ ಮೂಲಕ ಜೀವನ ರೂಪಿಸಿಕೊಳ್ಳಲು ಉದ್ಯೋಗ ಸಾರಥಿ ಯೋಜನೆಯನ್ನು ಜಾರಿಗೊಳಿಸಿದೆ ಎಂದು ತಿಳಿಸಿದರು.

ಸ್ವಾವಲಂಬಿ ಸಾರಥಿ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳು ಸರ್ಕಾರದ ಸಾಲ ಹಾಗೂ ಸಹಾಯಧನದ ನೆರವಿನಿಂದ ಎಂ–ಪ್ಯಾನಲ್ ಆಗಿರುವ ವಾಹನ ತಯಾರಿಕಾ ಸಂಸ್ಥೆಗಳೊಂದಿಗೆ ಹೊಂದಾಣಿಕೆ ಮಾಡಿಕೊಂಡು ತಮ್ಮ ಅಗತ್ಯಕ್ಕೆ ಅನುಗುಣವಾದ ಕಾರುಗಳನ್ನು ಖರೀದಿಸಿ ಉದ್ಯೋಗ ಆರಂಭಿಸಬಹುದು ಎಂದು ಹೇಳಿದರು. ವಾಹನವನ್ನು ಕೇವಲ ಖರೀದಿಸುವುದಷ್ಟೇ ಅಲ್ಲದೆ, ಅದನ್ನು ಆದಾಯದ ಮೂಲವನ್ನಾಗಿ ಮಾಡಿಕೊಂಡು ಆರ್ಥಿಕ ಪ್ರಗತಿ ಸಾಧಿಸಬೇಕು ಎಂದು ಸಲಹೆ ನೀಡಿದರು.

ಸ್ವಾವಲಂಬಿ ಸಾರಥಿ ಯೋಜನೆಯು ನಿರುದ್ಯೋಗ ಸಮಸ್ಯೆಗೆ ಪರಿಹಾರ ನೀಡುವ ಮಹತ್ವದ ಯೋಜನೆಯಾಗಿದ್ದು, ಯುವಕರಿಗೆ ಸ್ವಂತ ಉದ್ಯಮ ಆರಂಭಿಸಲು ಉತ್ತಮ ಅವಕಾಶ ಕಲ್ಪಿಸಿದೆ. ವಾಹನ ಚಾಲನಾ ಸೇವೆ, ಪ್ರವಾಸೋದ್ಯಮ, ಕ್ಯಾಬ್ ಸೇವೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಮೂಲಕ ಫಲಾನುಭವಿಗಳ ಜೀವನಮಟ್ಟ ಸುಧಾರಣೆಗೆ ನೆರವಾಗಲಿದೆ ಎಂದು ಅವರು ಹೇಳಿದರು.

ಸಭೆಯಲ್ಲಿ ಯೋಜನೆಯ ನಿಯಮಗಳು, ಬ್ಯಾಂಕ್ ಸಾಲ ಪ್ರಕ್ರಿಯೆ, ದಾಖಲೆಗಳ ಪರಿಶೀಲನೆ, ವಾಹನ ಆಯ್ಕೆ ಹಾಗೂ ಅನುದಾನ ಸೌಲಭ್ಯಗಳ ಕುರಿತು ವಿವರವಾದ ಮಾಹಿತಿ ನೀಡಿದರು. ಯೋಜನೆಯ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಯಶಸ್ವಿ ಉದ್ಯಮಿಗಳಾಗುವಂತೆ ಫಲಾನುಭವಿಗಳಿಗೆ ಕರೆ ನೀಡಲಾಯಿತು. ಈ ಸಂದರ್ಭದಲ್ಲಿ ನಿಗಮದ ಅಧಿಕಾರಿಗಳು, ಸಿಬ್ಬಂದಿ ಹಾಗೂ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳು ಉಪಸ್ಥಿತರಿದ್ದರು.

# ಜಿ.ಪಂ. ಮುಖ್ಯ ಕಾ.ನಿ. ಅಧಿಕಾರಿ ಭೇಟಿ: ಪರಿಶೀಲನೆ

**ಬೆಳಗಾವಿ ವಾರ್ತೆ ಧಾರವಾಡ:** ಶ್ರೀ ಭುವನೇಶ ದೇವಿದಾಸ್ ಪಾಟೀಲ್, ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ ಧಾರವಾಡ ಇವರು ಧಾರವಾಡ ಜಿಲ್ಲೆಯ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಆವರಣಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಆವರಣದಲ್ಲಿರುವ ಜಿಲ್ಲಾ ಪಶು ಆಸ್ಪತ್ರೆ (ಪಾಲಿಕ್ಲಿನಿಕ್)ಗೆ ಭೇಟಿ ನೀಡಿ ಜಾನುವಾರುಗಳಿಗೆ ಆಸ್ಪತ್ರೆಯಲ್ಲಿ ದೊರೆಯುವ ಚಿಕಿತ್ಸಾ ಸೌಲಭ್ಯಗಳನ್ನು ವೀಕ್ಷಿಸಿದರು. ಆಸ್ಪತ್ರೆಗೆ ಮಂಜೂರಾಗಿರುವ ನಾಲ್ಕೂ ಡಿ–ದರ್ಜೆ ಹುದ್ದೆಗಳು ಖಾಲಿ ಇರುವ ಬಗ್ಗೆ ಕಳವಳ ವ್ಯಕ್ತಪಡಿಸಿದರು. ಜಿಲ್ಲೆಯಲ್ಲಿರುವ ಎಲ್ಲ ಪಶುವೈದ್ಯಕೀಯ ಚಿಕಿತ್ಸಾ ಕೇಂದ್ರಗಳಲ್ಲಿ ಖಾಲಿಯಿರುವ ಡಿ–ದರ್ಜೆ ನೌಕರರ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುವ ಬಗ್ಗೆ ಪ್ರಸ್ತಾವನೆ ಸಲ್ಲಿಸಲು ಡಾ.ಎಸ್.ವ್ಹಿ.ಸಂತಿ, ಉಪನಿರ್ದೇಶಕರು (ಆಡಳಿತ) ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಧಾರವಾಡ ಇವರಿಗೆ ಸೂಚಿಸಿದರು.

ಜಿಲ್ಲೆಯಲ್ಲಿರುವ ಪಶುವೈದ್ಯಕೀಯ ಚಿಕಿತ್ಸಾ ಕೇಂದ್ರಗಳ ಕಟ್ಟಡಗಳ ನಿರ್ಮಾಣ, ರಿಪೇರಿ ಮತ್ತು ನಿರ್ವಹಣೆಗೆ ಸಂಬಂಧಿಸಿದಂತೆ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದರು. ಜಿಲ್ಲೆಯ ಉಪನಿರ್ದೇಶಕರು (ಆಡಳಿತ) ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಧಾರವಾಡ ಕಛೇರಿಯಲ್ಲಿ ಶೀಘ್ರವಾಗಿ ಇ–ಆಫೀಸ್ ತಂತ್ರಾಂಶ ಅಳವಡಿಸಿಕೊಳ್ಳಲು ಕ್ರಮವಹಿಸಲು ತಿಳಿಸಿದರು.

ಜಿಲ್ಲಾ ಪಶು ಆಸ್ಪತ್ರೆ (ಪಾಲಿಕ್ಲಿನಿಕ್)ಗೆ ಅವಶ್ಯವಿರುವ ದೊಡ್ಡ ಪ್ರಾಣಿಗಳ ಹೈಡ್ರಾಲಿಕ್ ಶಸ್ತ್ರ ಚಿಕಿತ್ಸಾ ಟೇಬಲ್ ಹಾಗೂ ಇತರೆ ಅವಶ್ಯ ಉಪಕರಣಗಳ ಸರಬರಾಜಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಡಾ.ಆರ್.ಡಿ.ಪಾಟೀಲ, ಉಪನಿರ್ದೇಶಕರು (ಪಾಲಿಕ್ಲಿನಿಕ್) ಇವರಿಗೆ ಸೂಚಿಸಿದರು.

ಜಿಲ್ಲಾ ಪಶುಪಾಲನಾ ತರಬೇತಿ ಕೇಂದ್ರಕ್ಕೆ ಭೇಟಿ ನೀಡಿ ಅವಶ್ಯ ಮೂಲ ಸೌಕರ್ಯಗಳನ್ನು ಇನ್ನಷ್ಟು ಉತ್ತಮ ಪಡಿಸಲು ಕ್ರಮ ವಹಿಸಲು ಸೂಚಿಸಿದರು.

ಕೃಷಿ ವಿಶ್ವವಿದ್ಯಾಲಯ ಆವರಣದಲ್ಲಿರುವ ಪಶುಪಾಲನಾ ಇಲಾಖೆಯ ಘನೀಕೃತ ವೀರ್ಯನಳಿಕೆ ಉತ್ಪಾದನಾ ಕೇಂದ್ರಕ್ಕೆ ಭೇಟಿ ನೀಡಿ ಹೋರಿಗಳ ಪಾಲನೆ, ವೀರ್ಯನಳಿಕೆಗಳ ಉತ್ಪಾದನೆ ಹಾಗೂ ಗುಣಮಟ್ಟ ನಿರ್ವಹಣೆ ಪ್ರಕ್ರಿಯೆಯನ್ನು ಸ್ವತಃ ವೀಕ್ಷಿಸಿ, ಕೇಂದ್ರದ ಕಾರ್ಯನಿರ್ವಹಣೆ ಬಗ್ಗೆ ತೃಪ್ತಿ ವ್ಯಕ್ತ ಪಡಿಸಿದರು. ಇನ್ನಷ್ಟು ಮೂಲಭೂತ ಸೌಕರ್ಯಗಳನ್ನು ಜಿಲ್ಲಾ ಪಂಚಾಯತ ಅನುದಾನದಲ್ಲಿ ಒದಗಿಸುವ ಭರವಸೆ ನೀಡಿ



ಒಟ್ಟಾರೆಯಾಗಿ ಇಲಾಖಾ ಚಟುವಟಿಕೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಗರಗ ಗ್ರಾಮದ ಪಶುಚಿಕಿತ್ಸಾಲಯಕ್ಕೆ ಭೇಟಿ ನೀಡಿದರು. ಸದರಿ ಪಶು ಚಿಕಿತ್ಸಾಲಯದಲ್ಲಿ ಕೃತಕ ಗರ್ಭಧಾರಣೆಯ ಉತ್ತಮ ಫಲಿತಾಂಶಕ್ಕಾಗಿ ಅಳವಡಿಸಿರುವ, ಜಾನುವಾರುಗಳನ್ನು ತಂಪಾಗಿಸುವ ಫಾಗರ್ ಸೌಲಭ್ಯವನ್ನು ಪರಿಶೀಲಿಸಿ, ಜಿಲ್ಲೆಯ ಉಳಿದ ಪಶುಚಿಕಿತ್ಸಾಲಯಗಳಲ್ಲಿ ಇದೇ ಮಾದರಿಯ ಸೌಲಭ್ಯ ಒದಗಿಸಲು ಸೂಚಿಸಿದರು. ಉತ್ಕೃಷ್ಟ ತಳಿಯ ಹೋರಿಗಳ ವೀರ್ಯನಳಿಕೆಯಿಂದ ಜನಿಸಿರುವ ಕರುಗಳನ್ನು ಕಂಡು ಸಂತೋಷ ವ್ಯಕ್ತಪಡಿಸಿದರು ಹಾಗೂ ಅವುಗಳಿಗೆ ಆರೋಗ್ಯ ವರ್ಧಕ ಪೂರಕ ಆಹಾರಗಳನ್ನು ವಿತರಿಸಿದರು.

ಶ್ರೀ ಮನೋಹರ ದೇಸಾಯಿ ಇವರ ಖಾಸಗಿ ಡೈರಿ ಫಾರಂಗೆ ಭೇಟಿ ನೀಡಿ, ಅಲ್ಲಿ ಪಾಲನೆ ಮಾಡುತ್ತಿರುವ ಸಾಹಿವಾಲ್ ತಳಿಯ ಹಸುಗಳನ್ನು ಹಾಗೂ ಬೀಜೋತ್ಪಾದನಾ ಘಟಕವನ್ನು ವೀಕ್ಷಿಸಿದರು.

ಮಾನ್ಯರ ಪ್ರವಾಸ ಸಂದರ್ಭದಲ್ಲಿ ಡಾ.ನಾಗರಾಜ ಜಂಟಿ ನಿರ್ದೇಶಕರು (ರಾಜ್ಯ ವಲಯ) ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಧಾರವಾಡ, ಡಾ.ಪ್ರಮೋದ ಮೂಡಲಗಿ, ಉಪನಿರ್ದೇಶಕರು, ಘನೀಕೃತ ವೀರ್ಯನಳಿಕೆ ಉತ್ಪಾದನಾ ಕೇಂದ್ರ ಹಾಗೂ ಇತರೆ ಪಶುವೈದ್ಯಾಧಿಕಾರಿಗಳು ಹಾಜರಿದ್ದರು.

# ಗೋಹತ್ಯೆ : ಕಿತ್ತೂರ ಬಂದ್, ಪ್ರತಿಭಟನೆ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರು:** ಗೋಹತ್ಯೆ ಹಾಗೂ ಅಕ್ರಮವಾಗಿ ಸಾಗಾಟ ಖಂಡಿಸಿಸಂಘಟ ನೆಗಳ ಜನಾಕ್ರೋಶವು ಮುಗಿಲು ಮುಟ್ಟಿದ್ದು ಬಂದ್ ಆಚರಿಸಿ ಭಜರಂಗದಳದ ನೇತೃತ್ವದಲ್ಲಿ ಕೋಟೆ ಆವರಣ ಮುಂಭಾಗ ಬೃಹತ್ ಪ್ರತಿಭಟನಾ ಸಭೆ ಹಮ್ಮಿಕೊಳ್ಳ ಲಾಗಿತ್ತು. ಸಭೆಯನ್ನುದ್ದೇಶಿಸಿ ಮಾತನಾಡಿದ ರಾಷ್ಟ್ರ ಗೋ ರಕ್ಷಣಾ ಪಡೆ ಸಂಸ್ಥಾಪಕ ಪುನೀತ್ ಕೇರಿಹಳ್ಳಿ ಸರ್ಕಾರಕ್ಕೆ ಹಾಗೂ ಪೋಲಿಸ್ ಇಲಾಖೆಗೆ ಎಚ್ಚರಿಕೆ ನೀಡಿದರು. ಈ ಕೂಡಲೇ ಕಸಾಯಿ ಖಾನೆಗಳನ್ನು ಮುಚ್ಚಬೇಕು ಹಿಂದೂಪರ ಸಂಘಟನೆಗಳ ಯುವಕರ ಮೇಲೆ ಪ್ರಕರಣ ದಾಖಲಿಸಿ ದ್ದನ್ನು ಹಿಂಪಡೆಯಬೇಕು. ಇಲ್ಲದಿದ್ದರೆ ಸುಮ್ಮನಿರುವುದಿಲ್ಲ ಎಂದರು.

ಮಾಜಿ ಶಾಸಕ ಮಹಾಂತೇಶ ದೊಡ್ಡಗೌಡರ ಮಾತನಾಡಿದರು. ನಂತರ ತಹಶೀಲ್ದಾರವರಿಗೆ ಗೋಹತ್ಯೆ ತಡೆಯುವಂತೆ ಮನವಿ ಸಲ್ಲಿಸಲಾಯಿತು. ಸಾನಿಧ್ಯವಹಿಸಿ ರಾಜಗುರು ಸಂಸ್ಥಾನ ಕಲ್ಮಠದ ಮಡಿವಾಳ ರಾಜಯೋಗಿಂದ್ರ ಸ್ವಾಮಿಜಿ ಮಾತನಾಡಿದರು. ಗೋಹತ್ಯೆ ಖಂಡಿಸಿ ಕಿತ್ತೂರಿನಲ್ಲಿ ಅಂಗಡಿ ಮುಂಗಟ್ಟು ಮುಚ್ಚಿ ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಲಯಿತು. ಪ್ರತಿಭಟನೆಯಲ್ಲಿ ನಿಚ್ಚಣಕಿ ಪಂಚಾಕ್ಷರಿ ಸ್ವಾಮಿಜಿ, ದೇಗುಲಹಳ್ಳಿ ಮಡಿವಾಳೇಶ್ವರ ಮಠದ ವೀರೇಶ್ವರ ಸ್ವಾಮಿಜಿ, ಕೃಷ್ಣ ಭಟ್, ಪ್ರಮೋದ ವಕ್ಕುಂದಮಠ, ಪುಂಡಲೀಕ ದಳವಾಯಿ, ಪಾಲ್ಗೊಂಡು ಮತ್ತಿರರು ಮಾತನಾಡಿ ಗೋಹತ್ಯೆ ಪ್ರಕರಣದಲ್ಲಿ ಕಠಿಣ ಕ್ರಮಕ್ಕೆ ಒತ್ತಾಯಿಸಿದರು.

ಮಂಡಳ ಅಧ್ಯಕ್ಷ ಶ್ರೀಕರ ಕುಲಕರ್ಣಿ, ಮುಖಂಡೆ ಲಕ್ಷೀ ಇನಾಮದಾರ, ಉಮಾದೇವಿ ಬಿಕ್ಕಣ್ಣವರ, ಡಾ. ಬಸವರಾಜ ಪರವಣ್ಣವರ, ಉಳವಪ್ಪ ಉಳ್ಳಾಗಡ್ಡಿ, ರಾಜು ಹೊಸೆಟ್ಟಿ, ಬಸವರಾಜ ಗಡೆನ್ನವರ, ಬಿಜೆಪಿ ಕಾರ್ಯಕರ್ತರು, ಮುಖಂಡರು, ಹಿಂದೂಪರ ಸಂಘಟನೆಗಳು, ವಿವಿಧ ಜಿಲ್ಲೆ– ತಾಲೂಕು, ಕಿತ್ತೂರು, ಎಂಕೆಹುಬ್ಬಳ್ಳಿ, ಬೈಲಹೊಂಗಲ, ಗೋಕಾಕ, ಬೆಳಗಾವಿ, ಚಿಕ್ಕೋಡಿ ನೂರಾರು ಹಳ್ಳಿಗಳಿಂದ ಸಾವಿರಾರು ಹಿಂದೂ ಕಾರ್ಯಕರ್ತರಿದ್ದರು.

# ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಜಿಲ್ಲಾಡಳಿತ ವಿರುದ್ಧ ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ನಾಯ್ಡು ವಾಗ್ದಾಳಿ



**ಬೆಳಗಾವಿ ವಾರ್ತೆ ಬಳ್ಳಾರಿ:** ನಗರದ ಕಪ್ಪಗಲ್ ರಸ್ತೆಯಲ್ಲಿ ಗೋವಿನ ತಲೆಗಳನ್ನು ಕಡಿದು ಬಿಸಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳನ್ನು ತಕ್ಷಣ ಬಂಧಿಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಬಿಜೆಪಿ ಜಿಲ್ಲಾ ಘಟಕ ಒತ್ತಾಯಿಸಿದೆ.

ನಗರದ ವಾಜಪೇಯಿ ಬಡಾವಣೆಯಲ್ಲಿರುವ ಬಿಜೆಪಿ ಕಚೇರಿಯಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ನಾಯ್ಡು, ಈ ಘಟನೆ ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟುಮಾಡಿದ್ದು, ಪೊಲೀಸರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ನ್ಯಾಯಸಮ್ಮತ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಪ್ರಕರಣ ಬೆಳಕಿಗೆ ಬಂದ ಬಳಿಕ ಬಿಜೆಪಿ ಹಾಗೂ ವಿವಿಧ ಹಿಂದೂಪರ ಸಂಘಟನೆಗಳು ಪ್ರತಿಭಟನೆ ನಡೆಸಿದ್ದು, ಗೋವಿನ ತಲೆಗಳಿಗೆ ವಿಧಿವತ್ತಾಗಿ ಅಂತ್ಯಸಂಸ್ಕಾರ ನೆರವೇರಿಸಲಾಗಿದೆ ಎಂದು ಅವರು ತಿಳಿಸಿದರು. ತಪ್ಪಿತಸ್ಥರನ್ನು ಶೀಘ್ರ ಬಂಧಿಸಿ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು.

ಜಿಲ್ಲೆಯಲ್ಲಿ ಅಕ್ರಮ ಗೋಹತ್ಯೆ ಪ್ರಕರಣಗಳು ಹೆಚ್ಚುತ್ತಿದ್ದು, ಈ ಬಗ್ಗೆ ಹಲವು ಬಾರಿ ಪೊಲೀಸರಿಗೆ ಮಾಹಿತಿ ನೀಡಿದ್ದರೂ ಸಮರ್ಪಕ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಿದ ಅವರು, ಪ್ರತಿಭಟನೆ ನಡೆಸಿದ ಬಿಜೆಪಿ ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲಿಸಿರುವ ಕ್ರಮವನ್ನು ಖಂಡಿಸಿದರು.

ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಸಾರ್ವಜನಿಕರ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಘಟನೆಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಅನಿಲ್ ಕುಮಾರ್ ನಾಯ್ಡು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ವಿರೋಧ ಪಕ್ಷದ ನಾಯಕ ಮೋತ್ಕರ್ ಶ್ರೀನಿವಾಸ್, ನಗರಾಧ್ಯಕ್ಷ ಗುರ್ರಂ ವೆಂಕಟರಮಣ, ಮಾಜಿ ಬುಡಾ ಅಧ್ಯಕ್ಷ ಮಾರುತಿ ಪ್ರಸಾದ್, ಪಾಲಿಕೆ ಸದಸ್ಯರಾದ ಗುಡಿಗಂಟೆ ಹನುಮಂತು, ಡಾ. ಬಿ.ಕೆ. ಸುಂದರ್, ಕೆ.ಎಸ್. ಅಶೋಕ್ ಕುಮಾರ್, ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಕೇಶವ ಅಮರ್ ಸೇರಿದಂತೆ ಬಿಜೆಪಿ ಮುಖಂ ಡರು ಹಾಗೂ ವಿವಿಧ ಹಿಂದೂಪರ ಸಂಘಟನೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಕುಂಬಾರಹಳ್ಳ ಪಿ.ಎಂ. ಶ್ರೀ ಸರಕಾರಿ ಪ್ರೌಢ ಶಾಲೆಯಲ್ಲಿ ಸಂಭ್ರಮದ ಆರಂಭೋತ್ಸವ



**ಬೆಳಗಾವಿ ವಾರ್ತೆ ಜಮಖಂಡಿ:** ತಾಲೂಕಿನ ಕುಂಬಾರಹಳ್ಳ ಗ್ರಾಮದ ಪಿ.ಎಂ. ಶ್ರೀ ಸರಕಾರಿ ಪ್ರೌಢ ಶಾಲೆಯಲ್ಲಿ ಹೊಸ ಶೈಕ್ಷಣಿಕ ವರ್ಷದ ಆರಂಭೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಶಾಲಾ ಆವರಣವನ್ನು ತಳಿರು ತೋರಣಗಳಿಂದ ಅಲಂಕರಿಸಲಾಗಿದ್ದು, ಶಾಲೆಗೆ ಆಗಮಿಸಿದ ವಿದ್ಯಾರ್ಥಿಗಳಿಗೆ ಪುಷ್ಪವೃಷ್ಟಿ ಮಾಡುವ ಮೂಲಕ ಆತ್ಮೀಯ ಸ್ವಾಗತ ನೀಡಲಾಯಿತು. ಮಕ್ಕಳಿಗೆ ಹೂವು ಹಾಗೂ ಪುಸ್ತಕಗಳನ್ನು ನೀಡಿ ಶುಭ ಹಾರೈಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯೋಪಾಧ್ಯಾಯ ನಾರಾಯಣ ಶಾಸ್ತ್ರಿ, "ಮಕ್ಕಳು ಮನುಕುಲದ ಬೆಳಕಾಗಿದ್ದು, ಅವರಿಗೆ ಉತ್ತಮ ಶಿಕ್ಷಣ ನೀಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಶಾಲೆಯ ಮೊದಲ ದಿನದಿಂದಲೇ ಮಕ್ಕಳು ಹಾಜರಾಗುವುದರಿಂದ ಅವರ ಭವಿಷ್ಯದ ನಿರ್ಮಾಣ ಸುಲಭವಾಗುತ್ತದೆ" ಎಂದು ಹೇಳಿದರು.


ಎಸ್‌ಡಿಎಂಸಿ ಅಧ್ಯಕ್ಷ ನಿಂಗಪ್ಪ ತೇರದಾಳ, ಸದಸ್ಯರಾದ ಯಮನಪ್ಪ ಮಾಂಗ, ಸದಾಶಿವ ಮಾಳಿ, ಶ್ರೀಮತಿ ಪದ್ಮವ್ವ ಹುದಲಿ, ಶೈಲಾ ಮಾಳಿ ಹಾಗೂ ಶಿಕ್ಷಕ ವೃಂದದವರು ಮಕ್ಕಳಿಗೆ ಹೂಗುಚ್ಛ ನೀಡಿ ಶಾಲೆಗೆ ಆಮಂತ್ರಿಸಿ ಶುಭ ಕೋರಿದರು.

ಶಿಕ್ಷಕರಾದ ಬಾಹುಬಲಿ ಮುತ್ತೂರ, ಸಂಗನಬಸವ ಉಟಗಿ, ಚಂದ್ರಕಾಂತ ಪೊ?ಲಿಸ್, ಅಶೋಕ ಬಿರಾದಾರಪಾಟೀಲ, ಶಾರದಾ ಮಠ, ಸವಿತಾ ಬೆನಕಟ್ಟಿ, ಮಂಜುಳಾ ಕಡಕೋಳ, ಆಸೀಫಾಭಾನು ಮೋಮಿನ್ ಹಾಗೂ ಶಕುಂತಲಾ ಬಿರಾದಾರ ಉಪಸ್ಥಿತರಿದ್ದು ಮಕ್ಕಳಿಗೆ ಸ್ವಾಗತ ಕೋರಿದರು.

# ತಂಬಾಕಿನಿಂದ ಯುವಶಕ್ತಿ ನಶಿಸುತ್ತದೆ: ಬಸವರಾಜ ಎಸ್.ಎಂ

**ಬೆಳಗಾವಿ ವಾರ್ತೆ ಕೊಪ್ಪಳ :** ಇಂದಿನ ದಿನಮಾನಗಳಲ್ಲಿ ಹಳ್ಳಿಗಳಲ್ಲಿ ತಂಬಾಕಿನಿಂದ ಇಂದಿನ ಯುವಜನತೆ ಇಂತಹ ವ್ಯಸನ ದುಶ್ಚಟ ಗಳಿಗೆ ಬಲಿಯಾಗಿ ಸಾಕಷ್ಟು ರೀತಿಯಲ್ಲಿ ಯಲ್ಲಿ ಕಿರು ವಯಸ್ಸಿನಲ್ಲೇ ರೋಗರು ಜನೆಗಳಿಗೆ ಬಲಿಯಾಗಿ ಯಾಗಿ ತಮ್ಮ ಜೀವನವನ್ನು ಹಾಳು ಮಾಡಿ ಕೊಳ್ಳುತ್ತಿ ದ್ದಾರೆ ಎಂದು ದಕ್ಷಿಣ ಭಾರತ ಹಿಂದಿ ಪ್ರಚಾರ ಸಭೆಯ ಭಾರತ ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಕಾನೂನು ಮಹಾ ವಿದ್ಯಾಲಯದ ಉಪ ಪ್ರಾಂಶುಪಾಲರಾದ. ಬಸವರಾಜ ಎಸ್ ಎಂ ಹೇಳಿದರು.

ಅವರು ದಕ್ಷಿಣ ಭಾರತ ಹಿಂದಿ ಪ್ರಚಾರ ಸಭೆಯ ಭಾರತ ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಕಾನೂನು ಮಹಾವಿದ್ಯಾಲಯದ ಯುವ ರೆಡ್ ಕ್ರಾಸ್ ಘಟಕ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಬೋಚನಹಳ್ಳಿ ಗ್ರಾಮದಲ್ಲಿ ವಿಶ್ವ ತಂಬಾಕು



ನಿಷೇಧ ದಿನಾಚರಣೆ ಅಂಗವಾಗಿ ತಂಬಾಕು ಮುಕ್ತ ಗ್ರಾಮದ ಕುರಿತು ಅರಿವು ನೆರವು ಕಾರ್ಯಕ್ರಮದಲ್ಲಿ ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಹಳ್ಳಿಗಳಲ್ಲಿ ಯುವಶಕ್ತಿ ಬಲಿಯಾಗಲು ಮುಖ್ಯ ಕಾರಣ ಇಂದಿನ ದುಶ್ಚಟಗಳು ಅದಕ್ಕೆ ನೀವು ಬಲಿಯಾಗದಿರಿ ಎಂದು ಊರಿನ ಗ್ರಾಮಸ್ಥರಿಗೆ ತಿಳಿಹೇಳಿದರು. ಕಾನೂನು ಮಹಾವಿದ್ಯಾಲಯದ ಯುವ ರೆಡ್ ಕ್ರಾಸ್ ಸ್ವಯಂಸೇವಕರು ಗ್ರಾಮದ ಪ್ರತಿ ಮನೆ ಮನೆಗೂ ಭೇಟಿ ನೀಡಿ ತಂಬಾಕಿನಿಂದ ಉಂಟಾಗುವ ಪರಿಣಾಮ, ಅನಾಹುತ ಗಳು ಮತ್ತು ರೋಗಗಳ ಕುರಿತು ಕುಟುಂಬದ ಸದಸ್ಯರೆಲ್ಲರಿಗೂ ಮಾಹಿತಿಯನ್ನು ತಿಳಿಸಿದರು.

ಅಷ್ಟೇ ಅಲ್ಲದೆ ಬೋಚನಹಳ್ಳಿ ಗ್ರಾಮದ ಸಾರ್ವಜನಿಕ ಸ್ಥಳಗಳಲ್ಲಿ ಸೇರಿದ ಜನರು ಮತ್ತು ಹಿರಿಯರೊಂದಿಗೆ ಸಮಾಲೋಚಿಸಿ ಗ್ರಾಮದಲ್ಲಿ ತಂಬಾಕು, ಗುಟುಕ, ಬೀಡಿ ಮತ್ತು ಸಿಗರೇಟಗಳಿಂದ ಜನರ ಆರೋಗ್ಯಕ್ಕೆ ಉಂಟಾಗುವ ಪರಿಣಾಮಗಳ ಕುರಿತು ಮಾಹಿತಿಯನ್ನು ನೀಡಿದರು. ತಂಬಾಕು ಸೇವಿಸುವುದರಿಂದ ಕ್ಯಾನ್ಸರ್, ಹೃದಯಘಾತ ಶ್ವಾಸಕೋಶದ ತೊಂದರೆ, ಗಂಟಲು, ಬಾಯಿ ಕ್ಯಾನ್ಸರ್ ಮುಂತಾದ ರೋಗಗಳು ಉಂಟಾಗುತ್ತವೆ. ಅದೇ ರೀತಿ ಧೂಮಪಾನದಿಂದ ಆರೋಗ್ಯ ಸಂಪೂರ್ಣವಾಗಿ ನಶಿಸುತ್ತದೆ ಇದರಿಂದ ಆಸ್ಪತ್ರೆಗಳಿಗೆ ಸಾಕಷ್ಟು ಹಣವನ್ನು ವ್ಯಯ ಮಾಡುವ ಪರಿಸ್ಥಿತಿ ಉಂಟಾಗುತ್ತದೆ ಮತ್ತು ಕುಟುಂಬಕ್ಕೆ ಸಾಕಷ್ಟು ತೊಂದರೆಯುನ್ನುಂಟು ಮಾಡುತ್ತದೆ. ಆದ್ದರಿಂದ ಬೋಚನಹಳ್ಳಿ ಗ್ರಾಮವನ್ನು ತಂಬಾಕು ಮುಕ್ತ ಗ್ರಾಮವನ್ನಾಗಿ ಮಾಡಲು ಗ್ರಾಮಸ್ಥರು ಸಹ ಸಾಕಷ್ಟು ರೀತಿಯಲ್ಲಿ ನಮಗೆ ಸಹಕರಿಸಬೇಕೆಂದು ವಿನಂತಿಸಿದರು.

## ಪ.ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಎಸ್.ಎಸ್.ಎಲ್.ಸಿ ಹಾಗೂ ಮೆಟ್ರಿಕ್ ನಂತರದ ವಿವಿಧ ಕೋರ್ಸಗಳಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡಲು ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು http://swdservices.karnataka.gov.in/ PrizeMoneyClientApp/register ಲಿಂಕ್ ಮೂಲಕ ಅರ್ಜಿ ಸಲ್ಲಿಸಿ ದಾಖಲಾತಿಗಳೊಂದಿಗೆ ಸಂಬಂಧಪಟ್ಟ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಜ್ಞವೈದ್ಯ, ವೈದ್ಯಾಧಿಕಾರಿಗಳ ನೇಮಕಕ್ಕೆ ಅರ್ಜಿ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಬಾಗಲಕೋಟೆ ಜಿಲ್ಲೆಯ ತಾಲೂಕಾ ಆಸ್ಪತ್ರೆಗಳು, ತಜ್ಞ ವೈದ್ಯಕರು ಮತ್ತು ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಜ್ಞ ವೈದ್ಯರು & ಹಿರಿಯ ವೈದ್ಯಾಧಿಕಾರಿಗಳ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುವ ಹುದ್ದೆಗೆ ಗುತ್ತಿದೆ ಆಧಾರದ ಮೇಲೆ ನೇಮಕಾತಿಗಾಗಿ ಪ್ರತಿ ದಿನ ನೇರ ಸಂದರ್ಶನಕ್ಕೆ ಹಾಜರಾಗಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೃಹಲಕ್ಷ್ಮೀ ಹಣ ಕಸಿದು ತಾಯಿಗೆ ಥಳಿಸಿದ ಮಗ



ಬೆಳಗಾವಿ ವಾರ್ತೆ ಚಿಕ್ಕೋಡಿ: ಹೆತ್ತ ತಾಯಿ ಒಂಬತ್ತು ತಿಂಗಳು ರಕ್ತವನ್ನು ಹಾಲನ್ನಾಗಿ ಉಣಿಸಿ ಸಾಕಿ ಸಲುಹುತ್ತಾಳೆ. ತನ್ನ ಮಡಿಲಲ್ಲಿ ಜನಿಸಿದ ಮಗ ವೃದಾಪ್ಯದಲ್ಲಿ ತನಗೆ ಆಸರೆಯಾಗುತ್ತಾನೆ ಅಂತಾ ಕನಸು ಕಟ್ಟಿಕೊಳ್ಳುತ್ತಾಳೆ. ಆದ್ರೆ ಇಲ್ಲೊಬ್ಬ ಪಾಪಿ ಮಗನಿಗೆ ಹೆತ್ತವ್ವನಿಗಿಂತ ಆಸ್ತಿ ದೊಡ್ಡಾಗಿದೆ.78 ವರ್ಷದ ವೃದ್ಧ ತಾಯಿ ಮೇಲೆ ಮಗನೇ ಮನಸೋಇಚ್ಛೆ ಹೊಡೆದು ಮನೆಯಿಂದ ಆಚೆ ಹಾಕಿರುವ ಘಟನೆ ರಾಯಬಾಗ ತಾಲೂಕಿನ ವಾಡಲಗಿ ಗ್ರಾಮದಲ್ಲಿ ನಡೆದಿದೆ.

ವೃದ್ಧ ತಾಯಿ ಸತ್ಯವ್ವಾ ಖಾಂಡೇಕರ ಎಂಬಾಕೆಗೆ ಬರುವ ಸರಕಾರದ ಗೃಹಲಕ್ಷ್ಮೀ, ವೃದ್ಯಾಪ ವೇತನ ಕಸಿದುಕೊಂಡ ಮಗ, ತಾಯಿಗೆ ಮನಬಂದತೆ ಥಳಿಸಿದ್ದಾನೆ ಎಂದು ತಾಯಿ ಆರೋಪಿಸಿದ್ದಾಳೆ.

ಇದೀಗ ಗಾಯಗೊಂಡಿರುವ ತಾಯಿ ಚಿಕ್ಕೋಡಿ ತಾಲೂಕಿನ ಬೆಳಕೂಡ ಗ್ರಾಮದಲ್ಲಿ ಒಡೆಯರ ತೋಟದ ಸಂಬಂಧಿಕರ ಮನೆಯಲ್ಲಿ ಆಶ್ರಯ ಪಡೆದಿದ್ದಾಳೆ. ಮಗನ ಹೊಡೆತಕ್ಕೆ ಕಣ್ಣೀರು ಹಾಕುತ್ತಾ ಕರಳ ಕುಡಿಯ ಕ್ರೌರ್ಯಕ್ಕೆ ಹೆತ್ತಮ್ಮ ನಲುಗಿ ಹೋಗಿದ್ದಾಳೆ.

# ಸೇವಾ ನಿವೃತ್ತಗೊಂಡ ಶಿಕ್ಷಕಿಗೆ ಮಾಲಾರ್ಪಣೆ ಮಾಡಿ; ಸನ್ಮಾನ

**ಬೆಳಗಾವಿ ವಾರ್ತೆ**

**ಹುಬ್ಬಳ್ಳಿ:** ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಸದಸ್ಯರು ಕಳೆದ 30ವರ್ಷಗಳಿಂದ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದ, ಆತ್ಮೀಯರು, ಮಾರ್ಗದರ್ಶಕರು, ಹಿತೈಸಿಗಳಾದ ಡಾ. ಸರ್ವಮಂಗಳಾ ಎಂ. ಕುದರಿ ಅವರು ಸೇವಾ ನಿವೃತ್ತ ರಾದ ನಿಮಿತ್ ಸರದಾರ ವೀರನಗೌಡ ಪಾಟೀಲ ಮಹಿಳಾ ವಿದ್ಯಾಪೀಠದ ಕಾಲೇ ಜಿನಲ್ಲಿ ಭೇಟಿ ಮಾಡಿ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿ ಂದ ಶಾಲು, ಮಾಲಾರ್ಪಣೆ ಮಾಡಿ ಶ್ರದ್ಧಾ, ಭಕ್ತಿಯಿಂದ ಗೌರವದಿಂದ ಆತ್ಮೀಯವಾಗಿ ಸನ್ಮಾನಿಸಿದರು. ಹುತ್ಪೂರ್ವಕವಾಗಿ ಅಭಿನಂದನೆಗಳನ್ನು ಸಲ್ಲಿಸಿದರು. ನಿವೃತ ಜೀವನ ಸುಖಕರವಾಗಿ ಇರಲೆಂದು ಶುಭ ಕೋರಿದರು. ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸ ರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಶ್ರೀ ಕತೃ ಜಗದ್ಗು ರು ಗುರು ಸಿದ್ದೇಶ್ವರ ಪೂಜಾ ಸೇವಾ ಸಮಿತಿಯ ಅಧ್ಯಕ್ಷ ಚನ್ನಬಸಪ್ಪ ಧಾರವಾ ಡಶೆಟ್ಟರ, ಶಿವಬಸಪ್ಪ ಸೊಬರದ, ಮುಂತಾದವರು ಇದ್ದರು. **ಡಾ. ಸರ್ವಮಂಗಳಾ ಎಂ. ಕುದರಿ ಅವರ ಪರಿಚಯ:** ಕಳೆದ 25 ವರ್ಷ ಗಳಿಂದ ಸರದಾರ ವೀರನಗೌಡ ಪಾಟೀಲ ಮಹಿಳಾ ವಿದ್ಯಾಪೀಠದಲ್ಲಿ ಕನ್ನಡ ಉಪನ್ಯಾಸಕರಾಗಿ ಸೇವೆ



ಸಲ್ಲಿಸಿದ್ದಾರೆ. ಈಗಿನ ವಿಜಯಪುರ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಿಂದ ಪ್ರಥಮ ಪಿ.ಎಚ್.ಡಿ ಯನ್ನು ಆಧುನಿಕ ಕನ್ನಡ ಸಾಹಿತ್ಯದಲ್ಲಿ ಅಕ್ಕಮಹಾದೇವಿ: ಒಂದು ಅಧ್ಯಯನ ಎಂಬ ವಿಷಯ ಮೇಲೆ 2012 ರಲ್ಲಿ ಪಡೆದಿದ್ದಾರೆ. ಚಿತ್ರದುರ್ಗ ಮುರಘಾಮಠ ನಡೆಸುವ ವಚನ ಕಮ್ಮಟ ಪರೀಕ್ಷೆಗಳಿಗೆ ನೂರಾರು ಮಕ್ಕಳಿಗೆ ತರಬೇತಿ ನೀಡಿದ್ದಾರೆ. ವಿವಿಧ ಸಂಘ, ಸಂಸ್ಥೆಯವರು ಶಿಕ್ಷಕ ರತ್ನ, ಬಸವ ಚೇತ'ನ, ಬಸವ ಜ್ಯೋತಿ, ಕಿತ್ತೂರ ರಾಣಿ ಚನ್ನಮ್ಮ ಪ್ರಶಸ್ತಿ ನೀಡಿ ಗೌರವಿಸಿದ್ದಾರೆ. ಈಗ ನಿವೃತ್ತ ನಂತರ ಡಾ ಸರ್ವಮಂಗಳಾ ಅವರು ಸಮಾಜ ಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡು ಇನ್ನೂ ಹೆಚ್ಚಿನ ಸೇವೆ ಸಮಾಜಕ್ಕೆ ಸಲ್ಲಿಸುವಂತಾಗಲಿ ಎಂದು ಸಮಿತಿಯವರು ಅಭಿನಂದಿಸಿ, ಶುಭ ಕೋರಿದರು.

# ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ಶಾಲಾ ಆರಂಭೋತ್ಸವ

## ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ನೀಡಬೇಕು : ಜಗದೀಶ ಪೂಜಾರ



**ಬೆಳಗಾವಿ ವಾರ್ತೆ ಗದಗ :** ಇಂದಿನ ಮಕ್ಕಳಿಗೆ ಸೌಕಯ ್ಯಗಳಿಗಿಂತ ಶಿಕ್ಷಣ ಮತ್ತು ಸಂಸ್ಕಾರ ನೀಡುವದು ಮುಖ್ಯವಾಗಿದೆ ಎಂದು ರತ್ನಾ ಕರವಾಣಿ ದಿನಪತ್ರಿಕೆಯ ಸಂಪಾದಕರಾದ ಜಗದೀಶ ಪೂಜಾರ ಅವರು ಹೇಳಿದರು.

ನಗರದ ಗಂಗಾಪೂರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಪೆನ್ಸಿಲ್, ಸಿಹಿ ವಿತರಿಸಿ ಮತ್ತು ಸನ್ಮಾನ ಸ್ವೀಕರಿಸಿ ಮಾತನಾಡಿ, ಇಂದು ಮಕ್ಕಳಿಗೆ ಸಂಸ್ಕಾರದ ಕೊರತೆಯಿಂದಾಗಿ ದುಶ್ಚಟಗಳಿಗೆ ಬಲಿಯಾಗುತ್ತಿರುವುದು ಮತ್ತು ಗುರು-ಹಿರಿಯರಿಗೆ ಗೌರವ ನೀಡದಿರುವುದು ಮುಖ್ಯ ಕಾರಣವಾಗಿದೆ. ಆದರೆ, ಶ್ರೀ ದುರ್ಗಾದೇವಿ ಶಿಕ್ಷಣ ಸಂಸ್ಥೆಯಲ್ಲಿ ಮಕ್ಕಳಿಗೆ ನೀಡಿರುವ ಸಂಸ್ಕಾರ ಮತ್ತು ಶಿಕ್ಷಣ ನೋಡಿ ಸಂತಸವಾಗಿದೆ. ಇದೇರೀತಿ ಪ್ರತಿ ಮನೆ ಮತ್ತು ಶಾಲೆಗಳಲ್ಲಿ ಶಿಕ್ಷಣದ ಜೊತೆಗೆ ಸಂಸ್ಕಾರ ನೀಡಬೇಕು ಎಂದು ಜಗದೀಶ ಪೂಜಾರ ಅವರು ಹೇಳಿದರು.

ಇಂದಿನ ದಿನಗಳಲ್ಲಿ ಶಿಕ್ಷಣ ಸಂಸ್ಥೆ ನಡೆಸುವದು ಅಷ್ಟು ಸುಲಭವಾದ ಕೆಲಸವಲ್ಲ, ಒಂದು ಶಿಕ್ಷಣ ಸಂಸ್ಥೆ ಯಶಸ್ವಿಯಾಗಿ ಕಾರ್ಯನಿರ್ವಹಿಸಬೇಕಾದರೆ ಪಾಲಕರ ಮತ್ತು ಶಿಕ್ಷಕರ ಸಹಕಾರ ಬಹಳ ಮುಖ್ಯವಾಗಿದೆ. ಮುಂದಿನ ದಿನಗಳಲ್ಲಿ ಈ ಸಂಸ್ಥೆಯು ಇನ್ನಷ್ಟು ಎತ್ತರಕ್ಕೆ ಬೆಳೆದು ತನ್ನ ಸ್ವಂತ ಜಾಗದಲ್ಲಿ ಶಿಕ್ಷಣ ಸಂಸ್ಥೆಯನ್ನು ನಿರ್ಮಿಸಿ ಬಡ ಮಕ್ಕಳಿಗೆ ಪದವಿ ವರೆಗೂ ಶಿಕ್ಷಣದ ಸೇವೆ ನೀಡಲಿ, ಈ ಸಂಸ್ಥೆಯ ಅಭಿವೃದ್ಧಿಗೆ ನಾನು ಕೂಡಾ ಸದಾ ಬೆನ್ನೆಲಬಾಗಿ ನಿಂತು ಸಹಾಯ, ಸಹಕಾರ ನೀಡುತ್ತೇನೆ ಎಂದು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಶ್ರೀ ದುರ್ಗಾ ದೇವಿ ಶಿಕ್ಷಣ ಸಮಿತಿಯ ಅಧ್ಯಕ್ಷರಾದ ವೆಂಕಟೇಶ ಇಮರಾಪೂರ, ಕಾರ್ಯದರ್ಶಿಗಳಾದ ಕವಿತಾ ಇಮರಾಪೂರ, ನಿರ್ದೇಶಕರಾದ ಮೋಹನ ಇಮರಾಪೂರ, ಸಲಹಾ ಸಮಿತಿಯ ಸದಸ್ಯರಾದ ಮುತ್ತು ಜಡಿ, ಚನ್ನಬಸಮ್ಮ ಹಾಳಕೇರಿ, ಆಡಳಿತಾಧಿಕಾರಿ ಸಾವಿತ್ರಿ ಕವಡಕಿ, ಮುಖ್ಯೋಪಾದ್ಯಾಯನಿ ಎಚ್.ಎಂ. ನದಾಫ್, ಸಹ ಶಿಕ್ಷಕಿಯರಾದ ಮಂಜುಳಾ ಹಿಡ್ಕಿಮಠ, ರೇಖಾ ಅಂಗಡಿ, ಸುಧಾ ತಿರಕಣ್ಣವರ, ವಂದನಾ ಕಲ್ಮನಿ, ಶೋಭಾ ಸಂಬರಗಿಮಠ, ಸಿಬ್ಬಂದಿ ಲಕ್ಷ್ಮೀ ಕಮಡೊಳ್ಳಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಛಾಯಾಗ್ರಾಹಕರಿಗೆ ವೃತ್ತಿ ಭದ್ರತೆ, ಕೌಶಲ್ಯಾಭಿವೃದ್ಧಿ ಮತ್ತು ಆರ್ಥಿಕ ನೆರವು ನೀಡಲು ಹಲವು ಯೋಜನೆಗಳನ್ನು ರೂಪಿಸಿದೆ ಅದರ ಸದುಪಯೋಗವನ್ನು ಪಡೆದುಕೊಳ್ಳಿ



**ಬೆಳಗಾವಿ ವಾರ್ತೆ ಮೂಡಲಗಿ :** ಕರ್ನಾಟಕ ಛಾಯಾಗ್ರಾಹಕರ ಸಂಘವು ರಾಜ್ಯದ ಛಾಯಾಗ್ರಾಹಕರಿಗೆ ವೃತ್ತಿ ಭದ್ರತೆ, ಕೌಶಲ್ಯಾಭಿವೃದ್ಧಿ ಮತ್ತು ಆರ್ಥಿಕ ನೆರವು ನೀಡಲು ಹಲವು ಯೋಜನೆಗಳನ್ನು ರೂಪಿಸಿದೆ ಅದರ ಸದುಪಯೋಗವನ್ನು ಪಡೆದುಕೊಳ್ಳಿ ಎಂದು ವೃತ್ತಿ ನಿರತ ಛಾಯಾಗ್ರಾಹಕರ ಸಂಘದ ಮೂಡಲಗಿ ತಾಲೂಕಾ ಘಟಕದ ಖಜಾಂಚಿ ಪ್ರಕಾಶ ದೊಂಗಡಿ ಕರೆ ನೀಡಿದರು.

ಅವರು ಪಟ್ಟಣದ ಶಿವಭೋಧರಂಗ ಮಠದ ಆವರಣದಲ್ಲಿ ಜರುಗಿದ, ಕೆಪಿಎ ಆಸರೆ ಯೋಜನೆಯಡಿಯಲ್ಲಿ ಆಕಸ್ಮಾತ್ ನಿಧನ ಹೊಂದಿದ ಸದಸ್ಯರ ಕುಟುಂಬಕ್ಕೆ 1 ಲಕ್ಷ ರೂ, ಆರ್ಥಿಕ ಸಹಾಯ ನೀಡುವ ಯೋಜನೆಗೆ ಶ್ರೀ ಮಠದ ದತ್ತಾತ್ರಯಬೋಧ ಸ್ವಾಮೀಜಿ ಚಾಲನೆ ನೀಡಿದ ಬಳಿಕ ಮಾತನಾಡಿ, ಇನ್ನೂ ತಾಲೂಕಿನಲ್ಲಿ ಯಾರು ನಮ್ಮ ಸಂಘದಲ್ಲಿ ಸೇರದೆ ಇರುವಂತ ಛಾಯಾಗ್ರಾಹಕರು ಸದಸ್ಯತ್ವವನ್ನು ಪಡೆದುಕೊಂಡು ಈ ಯೋಜನೆಯ ಜೊತೆಗೆ ಹಲವಾರು ಯೋಜನೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಛಾಯಾಗ್ರಾಹಕರ ಸಂಘದ ತಾಲೂಕಾಧ್ಯಕ್ಷ ಶಂಕರ ಹಾದಿಮನಿ, ಉಪಾಧ್ಯಕ್ಷ ರವಿ ಜಾದವ್, ಕಾರ್ಯದರ್ಶಿ ಮಹೇಶ ಭಸ್ಮೆ ಹಾಗೂ ಓಂ ಸಂತಾ ಅನೇಕ ಸದಸ್ಯರು ಉಪಸ್ಥಿತರಿದ್ದರು.

# ತಾಯಿಯನ್ನೇ ನಿರ್ಜನ ಪ್ರದೇಶದಲ್ಲಿ ಬಿಟ್ಟು ಹೋದ ಮಗ!



**ಬೆಳಗಾವಿ ವಾರ್ತೆ ಬೆಳಗಾವಿ:** ಜನ್ಮ ನೀಡಿ, ಸಾಕಿ ಸಲುಹಿ, ಬದುಕಿನ ಕೊನೆಯ ಉಸಿರಿನವರೆಗೂ ಮಗನ ನೆರಳೇ ಆಶ್ರಯವೆಂದು ನಂಬಿದ್ದ ವೃದ್ಧ ತಾಯಿಯನ್ನೇ ಮಗನೊಬ್ಬ ತಡರಾತ್ರಿ ನಿರ್ಜನ ಪ್ರದೇಶದಲ್ಲಿ ಬಿಟ್ಟು ಹೋದ ಅಮಾನವೀಯ ಘಟನೆ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಮುನವಳ್ಳಿ ಹೊರವಲಯದಲ್ಲಿ ಬೆಳಕಿಗೆ ಬಂದಿದೆ.

**ಅಸಹಾಯಕ ಸ್ಥಿತಿಯಲ್ಲಿ ಪತ್ತೆಯಾದ ವೃದ್ಧೆ:** ರಾಮದುರ್ಗ ತಾಲ್ಲೂಕಿನ ಸಾಲೊಳ್ಳಿ ಗ್ರಾಮದ ಕಮಲಮ್ಮ ಕಟ್ಟಿ ಎಂಬ ವೃದ್ಧೆಯನ್ನು ನಿನ್ನೆ ರಾತ್ರಿ ಸುಮಾರು 10 ಗಂಟೆ ವೇಳೆಗೆ ಮುನವಳ್ಳಿಯ ನವಿಲುತೀರ್ಥ ಡ್ಯಾಮ್ ಸಮೀಪದ ಗುಡ್ಡಗಾಡು ಪ್ರದೇಶದಲ್ಲಿ ಬಿಟ್ಟು ಮಗ ಪರಾರಿಯಾಗಿದ್ದಾನೆ ಎಂಬ ಮಾಹಿತಿ ಲಭ್ಯವಾಗಿದೆ. ಅನಾರೋಗ್ಯದಿಂದ ಬಳಲುತ್ತಿದ್ದ ವೃದ್ಧೆ ಬೆಳಗ್ಗೆ ಅಸಹಾಯಕ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಕಂಡವರ ಮುಂದೆ ಕೈಮುಗಿದು ನೆರವು ಬೇಡಿದ ದೃಶ್ಯ ಎಲ್ಲರ ಮನ ಕಲುಕಿದೆ.

**ತಾಯಿಯನ್ನು ಬಿಟ್ಟು ಪರಾರಿಯಾದ ಪುತ್ರ:** ಸ್ಥಳೀಯರು ವೃದ್ಧೆಯ ಸ್ಥಿತಿ ಕಂಡು ತಕ್ಷಣ ಆರೈಕೆ ಮಾಡಿದ್ದಾರೆ. ತಾನು ಸಾಕಿ ಬೆಳೆಸಿದ ಮಗನೇ ತಮಗೆ ಇಂಥ ಸ್ಥಿತಿ ತಂದಿದ್ದಾನೆ ಎಂದು ಕಮಲಮ್ಮ ಕಣ್ಣೀರಿಡುತ್ತ ಹೇಳಿಕೊಂಡಿರುವುದು ಮಾನವೀಯ ಮನಸ್ಸುಗಳನ್ನು ನಡುಗಿಸಿದೆ. ಮಗ ಸಂತೋಷ ಎಂಬಾತ ಸಂಕೇಶ್ವರ ಕೆಎಸ್‌ಆರ್‌ಟಿಸಿ ಡಿಪೋದಲ್ಲಿ ನೌಕರನಾಗಿ ಸೇವೆ ಸಲ್ಲಿಸುತ್ತಿದ್ದಾನೆ ಎಂಬ ಮಾಹಿತಿಯನ್ನು ವೃದ್ಧೆ ನೀಡಿದ್ದಾರೆ.

ಇದು ಕೇವಲ ಒಂದು ಕುಟುಂಬದ ನೋವಲ್ಲ. ಇಂದಿನ ಸಮಾಜದಲ್ಲಿ ವೃದ್ಧ ತಂದೆ-ತಾಯಿಗಳ ಭದ್ರತೆ, ಮಾನವೀಯ ಮೌಲ್ಯಗಳು ಮತ್ತು ಕಾನೂನು ಜವಾಬ್ದಾರಿಯ ಬಗ್ಗೆ ಗಂಭೀರ ಪ್ರಶ್ನೆ ಎಬ್ಬಿಸುವ ಘಟನೆ. ಮಕ್ಕಳಿಗಾಗಿ ಬದುಕಿನೆಲ್ಲವನ್ನೂ ಕರಗಿಸಿಕೊಂಡ ತಾಯಿಯನ್ನೇ ವೃದ್ಧಾಪ್ಯದಲ್ಲಿ ಭಾರವೆಂದು ಕಾಣುವ ಮನಸ್ಥಿತಿ ನಾಗರಿಕ ಸಮಾಜಕ್ಕೆ ಕಳಂಕವಾಗಿದೆ.

**ವೈರಲ್ ಆಯ್ತು ವೃದ್ಧೆಯ ನೋವು:** ಘಟನೆಯ ವಿಡಿಯೋ ವೈರಲ್ ಆಗುತ್ತಿದ್ದಂತೆ ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಮಾನವೀಯತೆ ಮರೆತ ಪುತ್ರನ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹ ಕೇಳಿಬರುತ್ತಿದೆ. ಮುನವಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಪೊಲೀಸರು ತಕ್ಷಣ ಪ್ರಕರಣದ ಗಂಭೀರತೆ ಅರಿತು ತನಿಖೆ ನಡೆಸಿ, ವೃದ್ಧ ತಾಯಿಗೆ ನ್ಯಾಯ ಮತ್ತು ರಕ್ಷಣೆ ಒದಗಿಸಬೇಕು ಎಂಬ ಒತ್ತಾಯ ಹೆಚ್ಚಾಗಿದೆ.

**ತಾಯಿ ಭಾರವಲ್ಲ - ತಾಯಿ ಬದುಕಿನ ಬೇರು:** ವೃದ್ಧ ತಾಯಿಯನ್ನು ಕತ್ತಲಿನಲ್ಲಿ ಬಿಟ್ಟುಹೋಗುವುದು ಕೇವಲ ಅಪರಾಧವಲ್ಲ; ಅದು ಮನುಷ್ಯತ್ವವನ್ನೇ ಪ್ರಶ್ನಿಸುವ ಕ್ರೌರ್ಯ. ಸಮಾಜ ಮೌನವಾಗಿದ್ದರೆ ಇಂತಹ ಘಟನೆಗಳು ಇನ್ನಷ್ಟು ಹೆಚ್ಚಾಗುವ ಅಪಾಯವಿದೆ. ಆಡಳಿತ, ಪೊಲೀಸ್ ಇಲಾಖೆ ಮತ್ತು ಸಮಾಜ-ಮೂವರೂ ಎಚ್ಚರಗೊಳ್ಳಬೇಕಾದ ಕ್ಷಣ ಇದು.

# ನಾಗರಬೆಟ್ಟದ ನೀರಾವರಿ ಕಾಮಗಾರಿ ಪೂರ್ಣಗೊಳಿಸಲು ಆಗ್ರಹ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲ್ಲೂಕಿನ ನಾಗರಬೆಟ್ಟದ ಏತನೀರಾವರಿ ಕಾಮಗಾರಿಯನ್ನು ತಕ್ಷಣವೇ ಪೂರ್ಣಗೊಳಿಸಿ ರೈತರ ಜಮೀನುಗಳಿಗೆ ಕಾಲುವೆ ನೀರು ಹರಿಸಬೇಕು ಹಾಗೂ ಆಲಮಟ್ಟಿ ಆಣೆಕಟ್ಟಿನ ಎತ್ತರವನ್ನು 524 ಮೀಟರ್‌ಗೆ ಹೆಚ್ಚಿಸಬೇಕು ಎಂದು ಒತ್ತಾಯಿಸಿ ಸರ್ಕಾರದ ವಿರುದ್ಧ ರೈತರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸ್ಥಳೀಯ ಶಾಸಕರು, ಉತ್ತರ ಕರ್ನಾಟಕದ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ನಿರ್ಲಕ್ಷ್ಯವೇ ಈ ಯೋಜನೆಗಳ ವಿಳಂಬಕ್ಕೆ ಮುಖ್ಯ ಕಾರಣ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ರಾಜ್ಯ ವಾಸುದೇವ ಮೇಟಿ ಬಣ) ರಾಜ್ಯ ಸಂಘಟನಾ ಕಾರ್ಯದರ್ಶಿ ಬಸನಗೌಡ ಬಿ. ಪಾಟೀಲ (ಮುರಾಳ) ಸರ್ಕಾರವನ್ನು ಆಗ್ರಹಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸೋಮವಾರ ಸಂಜೆ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಬೇಡಿಕೆಯನ್ನು ಈಡೇರಿಸುವಂತೆ ಒತ್ತಾಯಿಸಿ ರೈತ ಸಂಘದ ವತಿಯಿಂದ ಜೂನ್ 5 ರಂದು ಪಟ್ಟಣದ ಬಸವೇಶ್ವರ ವೃತ್ತದಿಂದ ತಹಶೀಲ್ದಾರ್ ಕಚೇರಿಯವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ ಮನವಿ ಪತ್ರ ಸಲ್ಲಿಸಲಾಗುವುದು ಎಂದು ಅವರು ತಿಳಿಸಿದರು.

ಲೋಕಾಯುಕ್ತ ತನಿಖೆಗೆ ಒತ್ತಾಯ ಕೆಲವು ಪ್ರಭಾವಿ ರಾಜಕಾರಣಿಗಳ ಹಸ್ತಕ್ಷೇಪದಿಂದಾಗಿ ನಾಗರಬೆಟ್ಟದ ಏತನೀರಾವರಿ ಯೋಜನೆಯ ಗುತ್ತಿಗೆದಾರರು ತೀರಾ ಕಳಪೆ ಕಾಮಗಾರಿ ನಡೆಸಿದ್ದಾರೆ. ಈ ಬಗ್ಗೆ ಕೂಡಲೇ ಲೋಕಾಯುಕ್ತ ತನಿಖೆಯಾಗಬೇಕು. ಅಧಿಕಾರಿಗಳು ಮತ್ತು ರೈತರು ಸಹಕಾರ ನೀಡುತ್ತಿಲ್ಲ ಎಂದು ಸುಳ್ಳು ಹೇಳುತ್ತಿರುವ ಗುತ್ತಿಗೆದಾರರು ಹಾಗೂ ಇದಕ್ಕೆ ಶಾಮೀಲಾಗಿರುವ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಅಭಿವೃದ್ಧಿ ಕೆಲಸಗಳಿಗೆ ಅಧಿಕಾರಿಗಳು ಸರಿಯಾಗಿ ಸಹಕರಿಸುತ್ತಿಲ್ಲ ಎಂದು ಅವರು ದೂರಿದರು.

**ಪ್ರಾದೇಶಿಕ ತಾರತಮ್ಯದ ಆರೋಪ:** ನಾಗರಬೆಟ್ಟ ಏತನೀರಾವರಿ ಯೋಜನೆ ಕಳೆದ 8 ವರ್ಷಗಳಿಂದ ನೆನೆಗುದಿಗೆ ಬಿದ್ದಿದೆ. ರಾಮನಗರ ಭಾಗದಲ್ಲಿ ಎಕರೆಗೆ 5 ಕೋಟಿ ರೂ. ನೀಡುವ



ಸರ್ಕಾರ, ಉತ್ತರ ಕರ್ನಾಟಕದಲ್ಲಿ ಕೇವಲ 25 ಎಕರೆಗೆ ಸೀಮಿತಗೊಳಿಸಿ ಅನ್ಯಾಯ ಮಾಡುತ್ತಿದೆ. ಅಲ್ಲಿಗೊಂದು ನ್ಯಾಯ, ಇಲ್ಲೊಂದು ನ್ಯಾಯವೇ? ಎಂದು ಪ್ರಶ್ನಿಸಿದ ಅವರು, ಉತ್ತರ ಕರ್ನಾಟಕದ 84 ಶಾಸಕರು ಸದನದಲ್ಲಿ ರೈತರ ಪರವಾಗಿ ಧ್ವನಿ ಎತ್ತುತ್ತಿಲ್ಲ ಏಕೆ ಎಂದು ಎಚ್ಚರಿಕೆ ನೀಡಿದರು. ಕೆಇಬಿ ಬಿಲ್ ರೂಪದಲ್ಲಿ ಸರ್ಕಾರಕ್ಕೆ ಹೋಗುತ್ತಿರುವುದು ರೈತರು ಮತ್ತು ಸಾರ್ವಜನಿಕರ ತೆರಿಗೆ ಹಣವೇ ಆಗಿದೆ ಎಂಬುದನ್ನು ಮರೆಯಬಾರದು ಎಂದರು.

ಈ ವೇಳೆ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರಸಂಗಪ್ಪಗೌಡ ಹಂಡರಗಲ್ಲ ಮಾತನಾಡಿ, "ಮುದ್ದೇಬಿಹಾಳ ತಾಲ್ಲೂಕಿನ ರೈತರ ಹಿತದೃಷ್ಟಿಯಿಂದ ಎಡದಂಡೆಯ ಕಾಲುವೆಗೆ ತಕ್ಷಣ ನೀರು ಹರಿಸಬೇಕು. ಸ್ಥಳೀಯ ಶಾಸಕರು ಹಾಗೂ ಅಧಿಕಾರಿಗಳು ಕಣ್ಣು ತೆರೆದು ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕು. ಹಳ್ಳಗಳಲ್ಲಿ ನೀರು ಹರಿಯುವುದರಿಂದ ಈ ಭಾಗದ ಅಂತರಜಲ ಮಟ್ಟ ಹೆಚ್ಚಾಗಲು ಸಹಕಾರಿಯಾಗುತ್ತದೆ" ಎಂದರು.

ಈ ಸಂದರ್ಭದಲ್ಲಿ ನಿಡಗುಂದಿ ರೈತ ಸಂಘದ ಅಧ್ಯಕ್ಷ ತಿರುಪತಿ ಬಂಡಿವಡ್ಡರ, ರೈತ ಸಂಘದ ತಾಲ್ಲೂಕು ಅಧ್ಯಕ್ಷ ಅಯ್ಯಪ್ಪ ಬಿದರಕುಂದಿ, ಪ್ರಧಾನ ಕಾರ್ಯದರ್ಶಿ ವೈ. ಎಲ್. ಬಿರಾದಾರ, ಬಸನಗೌಡ ಬ್ಯಾಲ್ಯಾಳ ಸೇರಿದಂತೆ ಪ್ರಮುಖ ರೈತ ಮುಖಂಡರು ಉಪಸ್ಥಿತರಿದ್ದರು.

# ಶಿಕ್ಷಕರ ನಿರಂತರ ಧನಾತ್ಮಕ ಚಿಂತನೆಯಿಂದ ವೃತ್ತಿ ಪಾವನ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಶಿಕ್ಷಕರು ನಿರಂತರವಾಗಿ ಚಿಂತನೆಯನ್ನು ಮುಂದುವರೆಸಿದಲ್ಲಿ ಮಾತ್ರವೇ ಅವರ ವೃತ್ತಿ ಪಾವನಗೊಳ್ಳಲು ಸಾಧ್ಯ" ಎಂದು ಸಂಸ್ಥೆಯ ನಿರ್ದೇಶಕ ಬಸವರಾಜ ನಾಲತವಾಡ ಅಭಿಪ್ರಾಯಪಟ್ಟರು.

ಪಟ್ಟಣದ ಜ್ಞಾನ ಭಾರತಿ ವಿದ್ಯಾ ಮಂದಿರ ಪಾಠ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ವೃತ್ತಿಗಳಲ್ಲಿ ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು. ಶಿಕ್ಷಕರು ನಿರಂತರ ಅಧ್ಯಯನ ಶೀಲ ಪ್ರವೃತ್ತಿಯನ್ನು ಬೆಳೆಸಿಕೊಂಡಿರಬೇಕು ಮತ್ತು ಶಾಲಾ ಅವಧಿಯಲ್ಲಿ ಅನ್ಯ ಚಿಂತನೆಗಳ ಕಡೆಗೆ ಗಮನ ಹರಿಸಬಾರದು. ವಿದ್ಯಾರ್ಥಿಗಳು ಸಹ ನಿರಂತರವಾಗಿ ಶಾಲೆಗೆ ಬರುವುದರೊಂದಿಗೆ ಸದಾ ಕಲಿಕೆಯಲ್ಲಿ ತೊಡಗಿಸಿಕೊಳ್ಳಬೇಕು" ಎಂದು ಅವರು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

**ಮುಖ್ಯಗುರುಗಳಿಗೆ ಸನ್ಮಾನ:** ಇದೇ ಸಂದರ್ಭದಲ್ಲಿ ಕನ್ನಡ ಮಾಧ್ಯಮ ಪ್ರಾಥಮಿಕ ವಿಭಾಗದ ನೂತನ ಮುಖ್ಯಗುರುಗಳಾಗಿ ಅಧಿಕಾರ ವಹಿಸಿಕೊಂಡ ಎಸ್. ಎಸ್.ಹರಿಜನ ಅವರನ್ನು ಸಂಸ್ಥೆಯ ವತಿಯಿಂದ ಗೌರವಿಸಿ, ಸನ್ಮಾನಿಸಲಾಯಿತು.

ಬಳಿಕ ಸನ್ಮಾನ ಸ್ವೀಕರಿಸಿ ಮಾತನಾಡಿದ ನೂತನ ಮುಖ್ಯಗುರು ಎಸ್.ಎಸ್.ಹರಿಜನ, "ನಮ್ಮ ವೃತ್ತಿ ನಮಗೆ ಆತ್ಮತೃಪ್ತಿ ತರುವಂತಿರಬೇಕು. ಅನ್ಯರ ತೋರಿಕೆಗೆ ಅಥವಾ ಪ್ರಶಂಸೆ ಸಿಗಲಿ ಎಂದು ಮಾಡುವ ನಾಟಕೀಯ ಚಟುವಟಿಕೆಗಳು ವೃತ್ತಿಯಲ್ಲಿ ಇರಬಾರದು. ಈ ಶೈಕ್ಷಣಿಕ ವರ್ಷದಲ್ಲಿ ನಾವೆಲ್ಲರೂ ಆನಂದದಾಯಕವಾಗಿ ಸೇವೆ ಸಲ್ಲಿಸಿ, ಮಕ್ಕಳ ಸರ್ವಾಂಗೀಣ ಪ್ರಗತಿಗೆ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ" ಎಂದು ಭರವಸೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಬಿ.ಪಿ.ಕುಲಕರ್ಣಿಯವರು ಅಧ್ಯಕ್ಷೀಯ ಭಾಷಣ ಮಾಡಿದರು. ಈ ಸಂದರ್ಭದಲ್ಲಿ ಪ್ರೌಢ ವಿಭಾಗದ ಮುಖ್ಯಗುರು ರಾಮಚಂದ್ರ ಹೆಗಡೆ, ಕಾಲೇಜಿನ ಪ್ರಾಚಾರ್ಯ ಅರುಣ ಹುನಗುಂದ, ಆಂಗ್ಲ ಮಾಧ್ಯಮ ಮುಖ್ಯಗುರುಮಾತೆ ರಂಜಿತಾ ಭಟ್ಟ, ಶಿಕ್ಷಕರುಗಳಾದ ಮಂಜುನಾಥ ಪಡದಾಳಿ, ಕಿರಣ ಕಡಿ, ಬಿ.ಆರ್.ಬೆಳ್ಳಿಕಟ್ಟಿ, ಆರ್.ಜೆ.ಸಾಗರ, ಅನ್ನಪೂರ್ಣ ನಾಗರಾಳ, ಸರಸ್ವತಿ ಮಡಿವಾಳರ್, ಭಾಗ್ಯ ಸಿದ್ದಾಪೂರ, ಮೀನಾಕ್ಷಿ ಗಣಾಚಾರಿ ಸೇರಿದಂತೆ ಶಾಲೆಯ ಇತರೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001